ಸಂಪುಟ : 9 ಸಂಚಿಕೆ 204 ಪುಟ : 4 ಬೆಲೆ: 3.00 ಶನಿವಾರ ಸೆಪ್ಟೆಂಬರ್ 21 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 204 Pages : 4 Price : 3.00 Saturday september 21 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕಸಾಪ 'ಸಾಹಿತ್ಯ ಸಿಂಚನ' ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಸೆ.21ರಂದು ಸಂಜೆ 6 ಗಂಟೆಗೆ ಕಸಾಪ ಕಾರ್ಯಾಲಯದ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಸಾಹಿತ್ಯ ಸಿಂಚನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ವಚನ ಸಾಹಿತ್ಯದಲ್ಲಿ ವ್ಯಕ್ತಿತ್ವ ವಿಕಸನ ವಿಷಯವಾಗಿ ಹುಬ್ಬಳ್ಳಿಯ ಡಾ. ಆರ್.ಬಿ. ಪಾಟೀಲ, ಮಹೇಶ ಪದವಿಪೂರ್ವ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಪ್ರೊ. ಆಯ್.ಎಸ್. ಹಿರೇಮಠ ಅವರು ಉಪನ್ಯಾಸ ನೀಡುವರು. ಸಾಹಿತ್ಯಾಸಕ್ತರಾದ ಕೆ.ಜಿ. ವ್ಯಾಪಾರಿ ಅತಿಥಿಗಳಾಗಿ ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಪರಿಷತ್ತಿನ ಸದಸ್ಯರು ಪಾಲ್ಗೊಳ್ಳಬೇಕೆಂದು ಕಾರ್ಯದರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಚಿಕಿತ್ಸೆಯ ದರದಲ್ಲಿ ಹೆಚ್ಚಳವಿಲ್ಲ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಜಿಲ್ಲಾ ಆಸ್ಪತ್ರೆಯಲ್ಲಿ 2014ರಿಂದ ಚಿಕಿತ್ಸಾ ದರಗಳಲ್ಲಿ ಯಾವುದೇ ಹೆಚ್ಚಳವಾಗಿರುವುದಿಲ್ಲ. 2018ರ ಡಿಎಂಇ ಇವರು ನಿಗದಿಪಡಿಸಿದ ದರಗಳ ಪ್ರಕಾರ ಕೆಲವೊಂದು ಚಿಕಿತ್ಸಾ ದರಗಳನ್ನು ಪರಿಸ್ಕೃರಿಸಲಾಗಿತ್ತು. ಆದರೆ ಮತ್ತೊಮ್ಮೆ ಸಮಿತಿಯಲ್ಲಿ ಚರ್ಚಿಸಿ ದರಗಳನ್ನು 2014ರಂತೆ ಮರು ನಿಗದಿಪಡಿಸಲಾಗಿದೆ.

ಬಿ.ಪಿ.ಎಲ್ ಕಾರ್ಡ್‌ದಾರರಿಗೆ 2014ರಿಂದಲೂ ಸಹ ಯಾವುದೇ ಹೊರೆ ಆಗದಂತೆ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ ಹಾಗೂ ಎ.ಪಿ.ಎಲ್ ಕಾರ್ಡ್‌ದಾರರರಿಗೂ ಹೊರೆ ಆಗದಂತೆ ಕನಿಷ್ಠ ದರ ನಿಗದಿಪಡಿಸಲಾಗಿದೆ. ಎ.ಪಿ.ಎಲ್/ಬಿ.ಪಿ.ಎಲ್ ಕಾರ್ಡ್ ಇಲ್ಲದೇ ಇದ್ದರೆ ಅವರಿಗೂ ಸಹ ಆರ್.ಎಂ.ಓ, ವೈದ್ಯಕೀಯ ಅಧೀಕ್ಷಕರು, ನಿರ್ದೇಶಕರ ನಿರ್ದೇಶನದ ಮೇರೆಗೆ ಬಿ.ಪಿ.ಎಲ್ ಕಾರ್ಡ್‌ದಾರರಿಗೆ ಇರುವ ಸೌಲಭ್ಯ ನೀಡಲಾಗುತ್ತಿದೆ. ಸಂಸ್ಥೆಯ ಆಸ್ಪತ್ರೆಯಲ್ಲಿ ಇನ್ನು ಅನೇಕ ಉನ್ನತ ಮಟ್ಟದ ಸೇವೆಗಳನ್ನು ಸಾರ್ವಜನಿಕರಿಗೆ 24*7 ನೀಡಲಾಗುತ್ತಿದೆ ಎಂದು ಜಿಮ್ಸ್ ಪ್ರಕಟಣೆ ತಿಳಿಸಿದೆ.

## ವಿದ್ಯುತ್ ಅದಾಲತ್ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಹರ/ಗ್ರಾಮೀಣ ಪ್ರದೇಶಗಳಲ್ಲಿನ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳಿನ 3ನೇ ಶನಿವಾರ ಸಹಾಯಕ ಕಾರ್ಯಪಾಲಕ ಅಭಿಯಂತರರು, ಗದಗ ಶಹರ/ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ವಿದ್ಯುತ್ ಅದಾಲತ್ ನಡೆಸುವ ಮೂಲಕ ಸ್ಥಳದಲ್ಲಿಯೇ ಗ್ರಾಹಕರ ಸಮಸ್ಯೆಗಳಿಗೆ ಪರಿಹಾರ ನೀಡಲು ಕ್ರಮ ವಹಿಸಲು ಸರ್ಕಾರವು ಆದೇಶಿಸಿರುವ ಪ್ರಯುಕ್ತ ಸೆ.21ರಂದು ಬೆಳಿಗ್ಗೆ 11 ಗಂಟೆಗೆ ವಿದ್ಯುತ್ ಅದಾಲತ್ ನಡೆಸಲಾಗುವುದು.

ಸಾರ್ವಜನಿಕರು ಪ್ರಕಟನೆಯನ್ನು ಗಮನಿಸಿ ತಮ್ಮ ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವಂತೆ ಪ್ರಕಟಣೆ ತಿಳಿಸಿದೆ.

### ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# ಲಕ್ಕುಂಡಿ ಅಭಿವೃದ್ಧಿಗೆ ಸಂಪೂರ್ಣ ಸಹಕಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಕುಂಡಿ ಪ್ರದೇಶವನ್ನು ಅಭಿವೃದ್ಧಿಪಡಿಸುವ ಮೂಲಕ ಜಾಗತಿಕ ಪಾರಂಪರಿಕ ಸ್ಥಳ ಎಂದು ಗುರುತಿಸುವಂತೆ ಮಾಡಲು ನಾವೆಲ್ಲರೂ ಶ್ರಮಿಸೋಣ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಅವರು ಮಾತನಾಡಿದರು.

ಲಕ್ಕುಂಡಿ ಪ್ರದೇಶದಲ್ಲಿ ಈಗಾಗಲೇ ಪ್ರವಾಸೋದ್ಯಮ ಇಲಾಖೆಯಿಂದ 5 ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಭೂಮಿ ಪೂಜೆಯನ್ನು ಇತ್ತೀಚೆಗೆ ನೆರವೇರಿಸಲಾಗಿದೆ. ಸರ್ಕಾರ ಲಕ್ಕುಂಡಿ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲಿದ್ದು, ಸಾರ್ವಜನಿಕರ ಸಹಕಾರವೂ ಅಗತ್ಯವಾಗಿದೆ ಎಂದರು.

ಲಕ್ಕುಂಡಿ ಐತಿಹಾಸಿಕವಾಗಿ ಬಹಳ ವಿಶಿಷ್ಟವಾಗಿದೆ. ಇತ್ತೀಚೆಗೆ ಲಕ್ಕುಂಡಿಯಲ್ಲಿ ಬೌದ್ಧ ಶಾಸನ ದೊರೆತಿದ್ದು ಇತಿಹಾಸವನ್ನು ಸಾರಿ ಹೇಳುತ್ತಿವೆ. ಲಕ್ಕುಂಡಿ ಇತಿಹಾಸ ಕುರಿತಂತೆ ಪುಸ್ತಕಗಳನ್ನು ಜನರಿಗೆ ತಲುಪಿಸುವ ಪ್ರಯತ್ನ ಆಗಿಲ್ಲ.



ಲಕ್ಕುಂಡಿ ಇತಿಹಾಸವನ್ನು ನಾವುಗಳೇ ಅರಿತು ಇನ್ನೊಬ್ಬರಿಗೆ ನಮ್ಮತನವನ್ನು ಪಸರಿಸುವ ಕೆಲಸ ಆಗಬೇಕಿದೆ ಎಂದು ಅಭಿಪ್ರಾಯಪಟ್ಟರು.

ಸರ್ಕಾರವು ನೀಡಿದ ಅನುದಾನವನ್ನು ಅನಗತ್ಯವಾಗಿ ಮನಬಂದಂತೆ ವ್ಯಯಿಸಲು ಅವಕಾಶವಿಲ್ಲ. ಪ್ರತಿ ರೂಪಾಯಿಯೂ ಮೌಲ್ಯಯುತ ಕಾರ್ಯಕ್ಕೆ ಬಳಕೆಯಾಗಬೇಕು. ವಿನಾಕಾರಣ ಅಪವ್ಯಯ ಸಹಿಸಲಾಗದು ಎಂದು ಸಂಬಂಧಿತ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

> ಅಭಿವೃದ್ಧಿ ಮತ್ತು ಉತ್ಖನನದ ವೇಳೆ ದೊರೆತ ಶಾಸನ, ಶಿಲೆ, ವಿಗ್ರಹಗಳಿಗೆ ಧಕ್ಕೆಯಾಗದಂತೆ ನಿಖರವಾಗಿ ಮೂಲ ವಿಗ್ರಹ ದೇವಸ್ಥಾನಗಳಿಗೆ ಧಕ್ಕೆಯಾಗದಂತೆ ಪ್ರಾಚ್ಯ ವಸ್ತು ಇಲಾಖೆಯ ಸೂಚನೆಯಂತೆ ಅಭಿವೃದ್ಧಿ ಕಾರ್ಯಗಳು ನಡೆಯಬೇಕು. ಲಕ್ಕುಂಡಿಯ ಅದ್ಭುತ ಇತಿಹಾಸ ಅನಾವರಣಗೊಳಿಸುವ ಮೂಲಕ ಜಗತ್ತಿಗೆ ಪಸರಿಸುವ ಕಾರ್ಯ ಆಗಬೇಕಿದೆ. ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಭೆಯನ್ನು ಪ್ರತಿ ಮೂರು ತಿಂಗಳಿಗೊಮ್ಮೆ ಮಾಡಬೇಕೆಂದು ಸಚಿವ ಎಚ್.ಕೆ. ಪಾಟೀಲ ಸೂಚಿಸಿದರು.

ಕೇಂದ್ರ ಸರ್ಕಾರದ ಪ್ರವಾಸೋದ್ಯಮ ಇಲಾಖೆಯಲ್ಲಿ ರಾಜ್ಯದ ಪ್ರವಾಸೋದ್ಯಮ ಅಭಿವೃದ್ಧಿಗೆ 250 ಕೋಟಿ ರೂ ಹಣ ಮೀಸಲಿದೆ. ಲಕ್ಕುಂಡಿ ಅಭಿವೃದ್ಧಿಗಾಗಿ ಅಗತ್ಯವಿರುವ ಡಿಪಿಆರ್ ಸಿದ್ಧಪಡಿಸಿ ಶೀಘ್ರವೇ ಸಲ್ಲಿಸುವ ಮೂಲಕ ಅನುಮೋದನೆ ಪಡೆಯುವಂತೆ ಸಚಿವ ಎಚ್.ಕೆ. ಪಾಟೀಲರು ಸೂಚಿಸಿದರು.

ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಲೋಕೋಪಯೋಗಿ ಇಲಾಖೆಯಲ್ಲಿ ಉತ್ತಮ ಆರ್ಕಿಟೆಕ್ ವಿಭಾಗ ಕಾರ್ಯನಿರ್ವಹಿಸುತ್ತಿದ್ದು, ಅವರ ಸಹಕಾರದೊಂದಿಗೆ ಉತ್ತಮ ಡಿಪಿಆರ್ ಸಿದ್ಧಪಡಿಸಿ ಸಲ್ಲಿಸಬಹುದಾಗಿದೆ. ಲಕ್ಕುಂಡಿ ಇತಿಹಾಸ ಪರಂಪರೆ ನಾಡಿನುದ್ದಕ್ಕೂ ಪಸರಿಸಲು ನಮ್ಮ ಸಂಪೂರ್ಣ ಸಹಕಾರ ಇದೆ ಎಂದು ಹೇಳಿದರು.

ಸಭೆಯಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯಮಟ್ಟದ ಸಲಹಾ ಸಮಿತಿ ಸದಸ್ಯರಾದ ಸಿದ್ದು ಪಾಟೀಲ, ಅ.ದ. ಕಟ್ಟಿಮನಿ ಸೇರಿದಂತೆ ಲಕ್ಕುಂಡಿ ಗ್ರಾ.ಪಂ ಸದಸ್ಯರು, ಸಾಹಿತಿ ಪುಂಡಲೀಕ ಕಲ್ಲಿಗನೂರ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಸಿಇಓ ಭರತ್ ಎಸ್, ಪುರಾತತ್ವ ಇಲಾಖೆಯ ಆಯುಕ್ತ ದೇವರಾಜ, ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕಿ ಸೌಮ್ಯ, ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ ಮೀನಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ನಿರ್ಮಿತಿ ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ಗಂಗಾಧರ ಶಿರೋಳ, ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ಹಾಜರಿದ್ದರು.

### ವಿವಿಧ ಯೋಜನೆಗಳ ಅನುಷ್ಠಾನಕ್ಕೆ ಆಗ್ರಹಿಸಿ ಕರವೇ ಪಾದಯಾತ್ರೆ, ಮನವಿ ಸಲ್ಲಿಕೆ

# ನೀರಾವರಿ ಯೋಜನೆಗಳ ಅನುಷ್ಠಾನವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಬಣ ಯಾವುದೇ ಹೋರಾಟ ಕೈಗೆತ್ತಿಕೊಂಡರೂ ಅದಕ್ಕೊಂದು ತಾರ್ಕಿಕ ಅಂತ್ಯ ನೀಡುವವರೆಗೆ ಹಿಂದಡಿ ಇಟ್ಟಿಲ್ಲ. ಕಳಸಾ-ಬಂಡೂರಿ, ಮಹದಾಯಿ ಉತ್ತರ ಕರ್ನಾಟಕದ ಜನರ, ರೈತರ ಅಗತ್ಯದ ಯೋಜನೆಯಾಗಿದ್ದು, ಅದು ಅನುಷ್ಠಾನ ಆಗುವವರೆಗೂ ನಿದ್ರಿಸುವುದಿಲ್ಲ ಎಂದು ಕರವೇ ರಾಜ್ಯ ಘಟಕದ ಅಧ್ಯಕ್ಷ ಪ್ರವೀಣ್ ಶೆಟ್ಟಿ ಹೇಳಿದರು.

ಮಹಾದಾಯಿ, ಕಳಸಾ ಬಂಡೂರಿ ಯೋಜನೆ ಶೀಘ್ರ ಅನುಷ್ಠಾನಕ್ಕೆ ಆಗ್ರಹಿಸಿ ನರಗುಂದದಿಂದ ಗದಗ ನಗರದವರೆಗೆ ನೂರಾರು ಕಾರ್ಯಕರ್ತರು ಹಾಗೂ ರೈತ ಮುಖಂಡರೊಂದಿಗೆ ಪಾದಯಾತ್ರೆ ನಡೆಸಿದ ಅವರು, ಶುಕ್ರವಾರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿ ಮಾತನಾಡಿದರು.



ನಾಡಿನ ನೆಲ-ಜಲ-ಭಾಷೆಗೆ ಸಂಬಂಧಿಸಿದಂತೆ ನಮ್ಮ ವೇದಿಕೆ ವತಿಯಿಂದ ಅನೇಕ ಹೋರಾಟಗಳನ್ನು ನಡೆಸಲಾಗಿದೆ. ಈ ವೇಳೆ ಪೊಲೀಸರ ಲಾಠಿ ಏಟು ತಿಂದಿದ್ದೇವೆ. ಸೆರೆವಾಸ ಅನುಭವಿಸಿದ್ದೇವೆ. ಯಾವುದಕ್ಕೂ ಜಗ್ಗದೇ ಮುಂದೆ ನಡೆದಿದ್ದೇವೆ. ಅನೇಕ ಸಂದರ್ಭದಲ್ಲಿ ನಮ್ಮ ಹೋರಾಟಕ್ಕೆ ಜಯ ಸಿಕ್ಕಿದೆ. ಅದೇರೀತಿ, ಕಳಸಾ ಬಂಡೂರಿ, ಮಹದಾಯಿ ಯೋಜನೆಯ ಶೀಘ್ರ ಅನುಷ್ಠಾನಕ್ಕೆ ಪಾದಯಾತ್ರೆ ನಡೆಸಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಯೋಜನೆ ಅನುಷ್ಠಾನಕ್ಕೆ ತ್ವರಿತ ನಿರ್ಧಾರ ಕೈಗೊಳ್ಳಬೇಕು ಎಂದರು.

> ಪಾದಯಾತ್ರೆಯ ವೇಳೆ ಅನೇಕ ಕಡೆಗಳಲ್ಲಿ ಜನರು ಬಯಲು ಶೌಚಕ್ಕೆ ತೆರಳುತ್ತಿದ್ದುದನ್ನು ನೋಡಿ ಬೇಸರವಾಯಿತು. ಇದನ್ನು ತಡೆಗಟ್ಟಲು ಜಿಲ್ಲಾಡಳಿತ ಕ್ರಮವಹಿಸಬೇಕು ಎಂದು ಕರವೇ ರಾಜ್ಯ ಘಟಕದ ಅಧ್ಯಕ್ಷ ಪ್ರವೀಣ್ ಶೆಟ್ಟಿ ವಿನಂತಿಸಿದಾಗ, ಕರವೇ ಬೇಡಿಕೆಗಳ ಈಡೇರಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಲಾಗುವುದು. ಬಯಲು ಶೌಚ ನಿರ್ಮೂಲನೆಗೆ ಜಿಲ್ಲಾಡಳಿತ ಕ್ರಮ ವಹಿಸಲಿದೆ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

▶▶ 4ನೇ ಪುಟಕ್ಕೆ

## ಪೌಷ್ಟಿಕ ಆಹಾರದ ತಿಳುವಳಿಕೆ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ನರಗುಂದ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನೆ ನರಗುಂದ ವತಿಯಿಂದ ವಿನಾಯಕ ನಗರದ ಮಾರುತಿ ದೇವಸ್ಥಾನದಲ್ಲಿ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಅಂಗವಾಗಿ ಆಯುರ್ವೇದಿಕ್ ಔಷಧಿಗಳ ಮಹತ್ವ ಮತ್ತು ಪೌಷ್ಠಿಕ ಆಹಾರದ ಕುರಿತು ತಿಳುವಳಿಕೆ ಕಾರ್ಯಕ್ರಮ ಜರುಗಿತು.

ಪುರಸಭೆ ಮಾಜಿ ಸದಸ್ಯರಾದ ಶಾಂತವ್ವ ಭಜಂತ್ರಿ ಕಾರ್ಯಕ್ರಮ ಉದ್ಘಾಟಿಸಿದರು. ಪ್ರಾಸ್ತಾವಿಕವಾಗಿ ಕಾರ್ಯಕ್ರಮ ಸಂಯೋಜಕ ಮಂಜು ಗುಗ್ಗರಿ ಮಾತನಾಡಿ, 0-6 ವರ್ಷದ ಮಕ್ಕಳು, ಕಿಶೋರಿಯರು, ಗರ್ಭಿಣಿಯರು ಹಾಗೂ ಬಾಣಂತಿಯರ ಪೌಷ್ಠಿಕ ಮಟ್ಟವನ್ನು ಸುಧಾರಣೆ ಮಾಡುವದು, ಕಡಿಮೆ ತೂಕದ ಮಕ್ಕಳ ಜನನ ಪ್ರಮಾಣವನ್ನು ನಿಯಂತ್ರಿಸುವದು, ರಕ್ತ ಹೀನತೆಯನ್ನು ತಡೆಗಟ್ಟುವದು ಈ ಅಭಿಯಾನದ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದರು.

ಮೇಲ್ವಿಚಾರಕಿ ಶಕುಂತಲಾ ಗಣಿ ಮಾತನಾಡಿ, ಪೋಷಣ್ ಮಾಸಾಚರಣೆಯನ್ನು ಪ್ರತಿ ವರ್ಷ ಸಪ್ಟೆಂಬರ್ ಮಾಹೆಯಲ್ಲಿ ಆಚರಿಸುತ್ತಿದ್ದು, ಪ್ರತಿದಿನ ಹಂತ ಹಂತವಾಗಿ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮೂಲಕ ಆಚರಿಸಲಾಗುತ್ತಿದೆ ಎಂದರು.

ಆಯುಷ್ ವೈದ್ಯಾಧಿಕಾರಿ ಡಾ. ಬಸವರಾಜ ಹಳ್ಳೆಮ್ಮನವರ ಮಾತನಾಡಿ, ಆಯುಷ್ ಇಲಾಖೆಯಿಂದ ದೊರೆಯುವ ಮಂಡಿ ನೋವು, ಇಮ್ಯುನಿಟಿ ಬೂಸ್ಟರ್, ಚರ್ಮ ರೋಗ ಸೇರಿದಂತೆ ವಿವಿಧ ರೀತಿಯ ಉಚಿತ ಔಷಧಿಗಳನ್ನು ವಿತರಿಸಿ ಅದರ ಬಳಕೆ ಹಾಗೂ ಉಪಯೋಗದ ಕುರಿತು ತಿಳಿಸಿದರು.

ಕಾರ್ಯಕ್ರಮದಲ್ಲಿ ಶೇಖರಪ್ಪ ಕುಟಕನಕೇರಿ, ಶಂಕ್ರಗೌಡ ಪಾಟೀಲ, ಬೀಮಪ್ಪ ಸೂರಿನ, ಪಾರ್ವತಿ ಹಿರೇಮಠ, ಮಕ್ತುಂಸಾಬ ನಾಲಬಂದ, ನೀಲವ್ವ ಹಿರೇಮಠ, ಆರೋಗ್ಯ ಇಲಾಖೆಯ ಸಿಬ್ಬಂದಿಗಳಾದ ಮಂಗಳಾ ಶಿಗ್ಗಾಂವಕರ, ಜಿ.ವಿ. ಕೊಣ್ಣೂರ ಕಿಶೋರಿಯರು, ಗರ್ಭಿಣಿ, ಮಕ್ಕಳು, ಕಾರ್ಯಕರ್ತೆಯರು, ಸಹಾಯಕಿಯರು ಪಾಲ್ಗೊಂಡಿದ್ದರು.

### ಮಾದಕ ವಸ್ತು, ಮಾದಕ ದ್ರವ್ಯ ನಿಯಂತ್ರಣ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಪಾಲಕರು, ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಳೆದ ಕೆಲವು ದಿನಗಳಿಂದ ಡ್ರಗ್ಸ್ ತಪಾಸಣೆ ಕಾರ್ಯವನ್ನು ಪೊಲೀಸ್ ಇಲಾಖೆ ತೀವ್ರಗೊಳಿಸಿರುವುದು ಶ್ಲಾಘನೀಯ. ಆದರೆ ಡ್ರಗ್ಸ್ ಪಾಸಿಟಿವ್ ಬಂದಿರುವ ಪ್ರತೀ ಪ್ರಕರಣಗಳನ್ನು ಫಾಲೊಅಪ್ ಮಾಡಿ, ನಿಜವಾದ ಕಾರಣೀಕರ್ತರಿಗೆ ಶಿಕ್ಷೆ ಆಗುವಂತೆ ಮಾಡುವ ಮೂಲಕ ಅವುಗಳನ್ನು ಮುಕ್ತಾಯಗೊಳಿಸಬೇಕು ಎಂದು ಸಮಿತಿ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಸೂಚಿಸಿದರು.

ಅವರು ಶುಕ್ರವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ನಾರ್ಕೊ ಕೋ ಆರ್ಡಿನೇಶನ್ ಕಮಿಟಿ ಸಭೆ ಜರುಗಿಸಿ, ಡ್ರಗ್ಸ್ ನಿಯಂತ್ರಣ ಮತ್ತು ಜಾಗೃತಿ



ಕಾರ್ಯಕ್ರಮಗಳ ಕುರಿತು ಪರಿಶೀಲಿಸಿ ಮಾತನಾಡಿದರು.

ಅವಳಿ ನಗರದಲ್ಲಿ ಮಾದಕ ವಸ್ತು ಮತ್ತು ಮಾದಕ ದ್ರವ್ಯ ಸೇವನೆ ಹಾಗೂ ಮಾರಾಟದ ಕುರಿತು ತಪಾಸಣೆ, ವಿಚಾರಣೆ ಕೈಗೊಂಡ ಬಗ್ಗೆ ಸಮಿತಿಗೆ ವರದಿ ಸಲ್ಲಿಸಬೇಕು. 354 ಯುವಕರ ಪೈಕಿ 168 ಜನ ವಿದ್ಯಾರ್ಥಿಗಳಲ್ಲಿ ಡ್ರಗ್ಸ್ ಸೇವನೆ ಪಾಸಿಟಿವ್ ಬಂದಿರುವುದು ಸಾಮಾನ್ಯ ಸಂಗತಿಯಲ್ಲ. ಡ್ರಗ್ಸ್ ಹಾನಿ ಕುರಿತು ಸಾರ್ವಜನಿಕರಲ್ಲಿ ವ್ಯಾಪಕ ಪ್ರಚಾರ ಮಾಡುವ ಅಗತ್ಯವಿದೆ ಎಂದು ಅವರು ತಿಳಿಸಿದರು.

> ಶಾಲೆ, ಕಾಲೇಜು, ವಿವಿ ಕ್ಯಾಂಪಸ್‌ಗಳು ಡ್ರಗ್ಸ್ ಮುಕ್ತವಾಗಿರುವಂತೆ ಎಚ್ಚರಿಕೆ ವಹಿಸಬೇಕು. ವಿದ್ಯಾರ್ಥಿಗಳೊಂದಿಗೆ ಪಾಲಕರು, ಶಿಕ್ಷಕರಲ್ಲಿಯೂ ಮಾದಕ ವಸ್ತುಗಳ ಕುರಿತು ವ್ಯಾಪಕ ಪ್ರಚಾರದ ಮೂಲಕ ಜಾಗೃತಿ ಮೂಡಿಸಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಾಗೃತಿ ಕಾರ್ಯಕ್ರಮಗಳಲ್ಲಿ ಇತರ ಇಲಾಖೆಗಳ ಸಹಭಾಗಿತ್ವ ಪಡೆದು, ಉತ್ತಮವಾದ ವ್ಯವಸ್ಥಿತ ಅರಿವು ಕಾರ್ಯಕ್ರಮಗಳನ್ನು ಜಿಲ್ಲೆಯಲ್ಲಿ ಜಾರಿಗೊಳಿಸಲು ಪೊಲೀಸ್ ಇಲಾಖೆಯಿಂದ ಕ್ರಿಯಾಯೋಜನೆ ರೂಪಿಸಲು ಅವರು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿ. ಬರಮನಿ, ಉಪ ಪೊಲೀಸ್ ಆಯುಕ್ತ ಮಹಾನಿಂಗ ನಂದಗಾವಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಕಾಲೇಜುಗಳ ಪ್ರಾಚಾರ್ಯರು, ವಿಶ್ವವಿದ್ಯಾಲಯಗಳ ವಿದ್ಯಾರ್ಥಿಕಲ್ಯಾಣ ಅಧಿಕಾರಿಗಳು ಮತ್ತು ಮಾದಕ ವಸ್ತು ಹಾಗೂ ಮಾದಕ ದ್ರವ್ಯಗಳ ನಿಯಂತ್ರಣ ತಜ್ಞರು ಭಾಗವಹಿಸಿದ್ದರು.

# ನ್ಯಾಯಾಧೀಶರ ಹೇಳಿಕೆ ವೈರಲ್ : ಅನುಮತಿ ಇಲ್ಲದೆ ಕಲಾಪದ ವಿಡಿಯೋ ಬಳಕೆಗೆ ಹೈಕೋರ್ಟ್ ನಿರ್ಬಂಧ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನ್ಯಾಯಾಲಯದ ಕಲಾಪದ ಕೆಲವು ವಿಡಿಯೋಗಳು ವೈರಲ್ ಆಗಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಕರ್ನಾಟಕ ಹೈಕೋರ್ಟ್, ಪೂರ್ವಾನುಮತಿ ಪಡೆಯದೆ ವಿಡಿಯೋ ರೆಕಾರ್ಡಿಂಗ್, ಹಂಚಿಕೆ ಮಾಡದಂತೆ ವೀಕ್ಷಕರಿಗೆ ಎಚ್ಚರಿಸಿದೆ. ಅಲ್ಲದೆ, ಲೈವ್ ಸ್ಟ್ರೀಮಿಂಗ್‌ಗೂ ಮುನ್ನ ಸಂದೇಶ ಹಾಕಲಾರಂಭಿಸಿದೆ.

ಕರ್ನಾಟಕ ಹೈಕೋರ್ಟ್ 2022ರ ಜನವರಿ 1ರಿಂದ "ಕರ್ನಾಟಕ ನ್ಯಾಯಾಲಯ ಕಲಾಪಗಳ ನೇರಪ್ರಸಾರ (ಲೈವ್‌ಸ್ಟ್ರೀಮ್) ಮತ್ತು ರೆಕಾರ್ಡಿಂಗ್ ನಿಯಮಗಳು 2021" ಅನ್ನು ಜಾರಿಗೊಳಿಸಿದೆ. ಇದರನ್ವಯ ಲೈವ್ ಸ್ಟ್ರೀಮಿಂಗ್ ಹಾಗೂ ರೆಕಾರ್ಡಿಂಗ್ ನಿಯಮಗಳನ್ನು ಸೂಚಿಸಲಾಗಿದೆ ಎಂದು ಬಾರ್ & ಬೆಂಚ್ ವರದಿ ಮಾಡಿದೆ.

ಈ ಸಂಬಂಧದ ನೋಟಿಸ್ ಅನ್ನು ಪ್ರತಿಯೊಂದು ಕೋರ್ಟ್ ಹಾಲ್‌ಗಳ ವಿಡಿಯೋ ಕಾನ್ಫರೆನ್ಸ್ ಪರದೆಯ ಮೇಲೆ ಕಲಾಪ ಆರಂಭಕ್ಕೂ ಮುನ್ನ ಮತ್ತು ಮಧ್ಯಾಹ್ನ ಭೋಜನದ ವೇಳೆಯಲ್ಲಿ ಪ್ರಸಾರ ಮಾಡಲಾಗಿದೆ.

"ಅನುಮತಿ ಪಡೆದಿರುವ ವ್ಯಕ್ತಿ ಅಥವಾ ಸಂಸ್ಥೆ ಹೊರತುಪಡಿಸಿ, ಯಾವುದೇ ವ್ಯಕ್ತಿ ಅಥವಾ ಸಂಸ್ಥೆ (ಮುದ್ರಣ, ವಿದ್ಯುನ್ಮಾನ ಮತ್ತು ಸಾಮಾಜಿಕ ಜಾಲತಾಣಗಳು) ಕಲಾಪದ ಲೈವ್ ಸ್ಟ್ರೀಮಿಂಗ್ ಅಥವಾ ಹೈಕೋರ್ಟ್ ಯೂಟ್ಯೂಬ್ ಚಾನಲ್‌ನಲ್ಲಿನ ವಿಡಿಯೋಗಳನ್ನು ರೆಕಾರ್ಡ್ ಮಾಡುವುದಾಗಲಿ, ಪ್ರಸರಣ ಮಾಡುವುದಾಗಲಿ ಮಾಡುವಂತಿಲ್ಲ" ಎಂದು ಸಂದೇಶದಲ್ಲಿ ಹೇಳಲಾಗಿದೆ. ಈ ನಿರ್ಬಂಧವು ಎಲ್ಲಾ ಸಂದೇಶ ಅಪ್ಲಿಕೇಶನ್‌ಗಳಿಗೂ ಅನ್ವಯಿಸಲಿದೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಪೂರ್ವಾನುಮತಿ ಪಡೆಯದೇ ಲೈವ್ ಸ್ಟ್ರೀಮಿಂಗ್‌ನ ಮರು ಪ್ರಸಾರ, ವರ್ಗಾವಣೆ, ಅಪ್ಲೋಡ್ ಮಾಡುವುದು, ಪೋಸ್ಟ್ ಮಾಡುವುದು, ಮಾರ್ಪಾಡು ಮಾಡುವುದು ಪ್ರಸಾರ ಅಥವಾ ಮರು ಪ್ರಸಾರವನ್ನು ಮಾಡುವಂತಿಲ್ಲ ಎಂದು ನ್ಯಾಯಾಲಯ ಹೇಳಿದೆ.

ನ್ಯಾಯಾಲಯದ ಕಲಾಪವನ್ನು ರೆಕಾರ್ಡ್ ಮಾಡಲು ಅಥವಾ ಅದರ ನಿರೂಪಣೆಗೆ ಯಾವುದೇ ವ್ಯಕ್ತಿಗೆ ಅನುಮತಿ ನೀಡಲಾಗಿಲ್ಲ. ನ್ಯಾಯಾಲಯದ ನಿಯಮ ಉಲ್ಲಂಘಿಸಿದ ವ್ಯಕ್ತಿ ಅಥವಾ ಸಂಸ್ಥೆಯ ವಿರುದ್ಧ ಕಾನೂನಿನಡಿ ಕ್ರಮಕೈಗೊಳ್ಳಲಾಗುತ್ತದೆ. ನ್ಯಾಯಾಲಯದ ಕಲಾಪದ ರೆಕಾರ್ಡಿಂಗ್ ಮತ್ತು ಆರ್ಕೈವ್ ದತ್ತಾಂಶದ ಮೇಲೆ ನ್ಯಾಯಾಲಯಕ್ಕೆ ವಿಶೇಷ ಹಕ್ಕುಸ್ವಾಮ್ಯವಿದೆ ಎಂದು ನೋಟಿಸ್‌ನಲ್ಲಿ ಹೇಳಲಾಗಿದೆ.

# ಶರಣ ಮಾದಯ್ಯ ಕಾಯಕ ಜೀವಿಯಾಗಿದ್ದರು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹೂಗಾರ ಸಮಾಜದವರು ಹೂವಿನ ಮನಸ್ಸು ಹೊಂದಿದವರು. ಹೂವು ಬಾಡುತ್ತದೆ, ಆದರೆ ಹೂಗಾರ ಸಮಾಜದವರ ಮನಸ್ಸು ಬಾಡದೆ, ಸಮಾಜವನ್ನು ಅರಳಿಸುವ ಕೆಲಸ ಮಾಡುತ್ತಿದೆ ಎಂದು ಸಮಾಜದ ಹಿರಿಯರಾದ ಡಾ.ಶಿವಾನಂದ ಹೂಗಾರ ಹೇಳಿದರು.

ಅವರು ಪಟ್ಟಣದ ಸರಾಫ್ ಬಜಾರದಲ್ಲಿರುವ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಬುಧವಾರ ಸಮಾಜದ ವತಿಯಿಂದ ಬಸವಾದಿ ಶರಣ ಹೂಗಾರ ಮಾದಯ್ಯನವರ ಜಯಂತಿ ಆಚರಣೆಯ ಅಂಗವಾಗಿ ಮಾದಯ್ಯನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.12 ನೇ ಶತಮಾನದಲ್ಲಿ ರಾಜನಾದ ಸಕಲೇಶ ಮಾದರಸ ಹಾಗೂ ಹೂಗಾರ ಮಾದಯ್ಯನವರು, ಕಾಯಕದಲ್ಲಿ ಮುಕ್ತಿ ಮಾರ್ಗವಿದೆ ಎಂದು ಜಗತ್ತಿಗೆ ಸಾರಿದ್ದಾರೆ. ಕಾಯಕ ಜೀವಿಯಾಗಿದ್ದ ಶರಣ ಮಾದಯ್ಯ ಯಾರ ಮನಸ್ಸಿಗೂ ನೋವು ಮಾಡಿದವರಲ್ಲ. ಇಡೀ ಜಗತ್ತಿಗೆ ಅವರು ನೀಡಿದ ಸಂದೇಶಗಳು ಸದಾ ಸ್ಮರಣೀಯವಾಗಿದ್ದು, ಅವರ ಬಗ್ಗೆ ಮುಂದಿನ ಪೀಳಿಗೆಗೆ ತಿಳಿಸಿಕೊಡುವ ಕಾರ್ಯ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಡಾ.ಶೇಖರ ಹೂವಿನ, ಚನವೀರಪ್ಪ ಹೂಗಾರ, ಟಿ.ಎಸ್. ಹೂಗಾರ, ವಿರೂಪಾಕ್ಷಪ್ಪ ಹೂಗಾರ, ಫಕ್ಕೀರಪ್ಪ ಹೂಗಾರ, ಶಿವಾನಂದ ಹೂಗಾರ, ಶ್ರೀಕಾಂತ ಹೂಗಾರ, ಗಂಗಾಧರ, ಯಲ್ಲಪ್ಪ, ರಾಜು ಹೂವಿನ, ಮಂಜುಳಾ ಹೂಗಾರ, ಜಯಶ್ರೀ ಹೂಗಾರ, ಜ್ಯೋತಿ ಹೂಗಾರ ಸೇರಿದಂತೆ ಅನೇಕರು ಹಾಜರಿದ್ದರು.

# ಮದ್ಯವರ್ಜನ ಶಿಬಿರದ ಪೂರ್ವಭಾವಿ ಸಭೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಗವಿಮಠದಲ್ಲಿ 3ನೇ ಬಾರಿ ನಡೆಯುತ್ತಿರುವ ಮದ್ಯವರ್ಜನ ಶಿಬಿರ ಅಕ್ಟೋಬರ್ 13ರಿಂದ 20ರವರೆಗೆ ನಡೆಸುವಂತೆ ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಗದಗ ಜಿಲ್ಲಾ ನಿರ್ದೇಶಕ ಯೋಗೀಶ ಎ., ನಮ್ಮ ಸಂಘದಿಂದ ಹಲವಾರು ಸಮಾಜಮುಖಿ ಕಾರ್ಯಗಳು ನಡೆಯುತ್ತಿದ್ದು, ಅವುಗಳಲ್ಲಿ ಮಹಿಳೆಯರ ಸಬಲೀಕರಣ, ಕೆರೆಗಳ ಹೂಳೆತ್ತುವ ಕೆಲಸ, ಶಿಕ್ಷಕರ ಕೊರತೆಯಿದ್ದ ಶಾಲೆಗಳಿಗೆ ಶಿಕ್ಷಕರ ಪೂರೈಕೆ, ಮದ್ಯ ವರ್ಜನ ಶಿಬಿರದಂತ ಅನೇಕ ಕಾರ್ಯಗಳು ಸರಾಗವಾಗಿ ನಡೆದಿವೆ. ರಾಜ್ಯದಲ್ಲಿ 1832ಕ್ಕೂ ಹೆಚ್ಚು ಶಿಬಿರಗಳನ್ನು ಮಾಡಿ 132600 ಜನರನ್ನು ವ್ಯಸನಮುಕ್ತರನ್ನಾಗಿಸಿದೆ. ಈ ಎಲ್ಲ ಜನರು ತಮ್ಮ ಕುಟುಂಬದೊಂದಿಗೆ ಗೌರವಯುತವಾದ ಬದುಕು ಬದುಕುತ್ತಿದ್ದಾರೆ ಎಂದರು. ಕೊಪ್ಪಳ ಪ್ರಾದೇಶಿಕ ಜನ ಜಾಗೃತಿ ಯೋಜನೆಯ ಯೋಜನಾಧಿಕಾರಿ ನಾಗೇಶ ಮಾತನಾಡಿ, ಮನೆ ಕಟ್ಟುವದು ಸುಲಭ. ಆದರೆ ಮನಸ್ಸು ಕಟ್ಟುವದು ಕಷ್ಟ. ಈ ಶಿಬಿರದಲ್ಲಿ ವ್ಯಸನಿಗಳ ಮನಸ್ಸು ಹಿಡಿದು ಅವರ ಮನಃಪರಿವರ್ತನೆ ಮಾಡುವುದು ಕಷ್ಟದ ಕೆಲಸ. ಕೇವಲ 8 ದಿನದಲ್ಲಿ ಅವರ ಮನ ಪರಿವರ್ತಿಸಿದ ಶ್ರೇಯಸ್ಸು ನಮ್ಮ ಸಂಘಕ್ಕಿದೆ ಎಂದರು. ಈ ಸಂದರ್ಭದಲ್ಲಿ ಗಣ್ಯರಾದ ರಾಮಣ್ಣ ಕಮಾಜಿ, ಬಿ.ಬಿ. ಸುಂಕಾಪೂರ, ಡಾ. ಎಸ್.ಸಿ. ಚವಡಿ, ಅಶೋಕ ಸೋನಗೋಜಿ, ಹಮೀದ ಮುಜಾವರ, ಬಸವರಾಜ ಬಾತಾಖಾನಿ, ಗುರಣ್ಣ ಶೆಟ್ಟರ, ಚನ್ನಪ್ಪ ಕರಿಗೂಳಪ್ಪನವರ, ಸಿ.ಎಸ್. ಪತ್ರಿ, ಶಿರಹಟ್ಟಿ ಯೋಜನಾಧಿಕಾರಿ ಪುನಿತ ಓಲೇಕಾರ ಇತರರು ಇದ್ದರು.

## 2024-25ನೇ ಸಾಲಿನ ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

# ಕ್ರೀಡಾಸಕ್ತರಿಗೆ ಸುವರ್ಣಾವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ



2024-25ನೇ ಸಾಲಿನ ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಗಳನ್ನು ಪುರುಷ ಹಾಗೂ ಮಹಿಳೆಯರಿಗೆ ಸೆಪ್ಟೆಂಬರ್ 24 ಮತ್ತು 25ರಂದು ಬೆಳಿಗ್ಗೆ 9 ಗಂಟೆಗೆ ಕೆ.ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಆಯೋಜಿಸಲಾಗಿದೆ. ತಾಲೂಕು ಮಟ್ಟದಲ್ಲಿ ವೈಯಕ್ತಿಕ ಸ್ಪರ್ಧೆಯಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದವರು ಹಾಗೂ ಗುಂಪು ಆಟಗಳಲ್ಲಿ ಪ್ರಥಮ ಸ್ಥಾನ ಪಡೆದು ವಿಜೇತರಾದವರು ಮಾತ್ರ ಜಿಲ್ಲಾ ಮಟ್ಟದಲ್ಲಿ ಕ್ರೀಡಾಕೂಟಗಳಲ್ಲಿ ಭಾಗವಹಿಸಬೇಕೆಂದು ತಿಳಿಸಲಾಗಿದೆ.

ಸ್ಪರ್ಧೆಗಳ ವಿವರ-ಅಥ್ಲೆಟಿಕ್ಸ್ ಸ್ಪರ್ಧೆಗಳು, ಪುರುಷರಿಗೆ: 100ಮೀ, 200ಮೀ, 400ಮೀ, 800ಮೀ, 1500ಮೀ, 5000ಮೀ ಓಟ, 10000ಮೀ ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಎಸೆತ, ಡಿಸ್ಕಸ್ ಎಸೆತ, 110ಮೀ ಹರ್ಡಲ್ಸ್, 4*100 ಮೀ ರಿಲೇ, 4*400 ಮೀ ರಿಲೇ.

ಅಥ್ಲೆಟಿಕ್ಸ್ ಸ್ಪರ್ಧೆಗಳು, ಮಹಿಳೆಯರಿಗೆ: 100ಮೀ, 200ಮೀ, 400ಮೀ, 800ಮೀ, 1500ಮೀ, 3000ಮೀ ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಎಸೆತ, ಡಿಸ್ಕಸ್ ಎಸೆತ, 100ಮೀ ಹರ್ಡಲ್ಸ್, 4*100 ಮೀ ರಿಲೇ, 4*400 ಮೀ ರಿಲೇ, ಕುಸ್ತಿ ಕ್ರೀಡೆಗಳು

ಈಜು ಪುರುಷರಿಗೆ ಮತ್ತು ಮಹಿಳೆಯರಿಗೆ (ಆಯ್ಕೆ): 100, 200, 400, ಮೀ ಫ್ರೀ ಸ್ಟೈಲ್, 100, 200 ಬ್ಯಾಕ್ ಸ್ಟ್ರೋಕ್, 100, 200 ಮೀ ಬ್ರೆಸ್ಟ್ ಸ್ಟ್ರೋಕ್, 100ಮೀ ಬಟರ್ ಫ್ಲೈ, 200 ಮೀ. ಇಂಡಿವಿಜುವಲ್ ಮಿಡ್ಲೆ, 4*100 ಮೀ ಫ್ರೀ ಸ್ಟೈಲ್ ರಿಲೇ.

ಸಾಂಪ್ರದಾಯಿಕ ಯೋಗಾಸನ: ಪಾದ ಹಸ್ತಾಸನ, ಆಕರ್ಣ ಧನುರಾಸನ, ಊರ್ದ್ವಧನುರಾಸನ, ಅರ್ಥಮತ್ಸೇಂದ್ರಿಯ ಅಸನ. ಈ 4 ಆಸನಗಳನ್ನು ಆಯ್ಕೆ ಮಾಡಿ ಜೊತೆಗೆ 3 ಐಚ್ಛಿಕ ಆಸನಗಳನ್ನು ಪ್ರದರ್ಶಿಸಬೇಕು. ಜಿಲ್ಲಾ ಮಟ್ಟದಲ್ಲಿ ಕಡ್ಡಾಯ ಆಸನ ಮತ್ತು ಐಚ್ಛಿನ ಆಸನಗಳ ಅಂತಿಮ ಸ್ಥಿತಿಯಲ್ಲಿ ಕ್ರೀಡಾಪಟುಗಳು 10 ಸೆಕೆಂಡುಗಳ ಕಾಲ ನಿಲ್ಲಬೇಕು.

ಕಲಾತ್ಮಕ ಯೋಗಾಸನ: ವೈಯಕ್ತಿಕ: ಈ ಸ್ಪರ್ಧೆಯಲ್ಲಿ ಸ್ಪರ್ಧಿಗಳು ಕಡ್ಡಾಯವಾಗಿ 2 ಮುಂದೆ ಬಾಗಿ ಮಾಡುವ ಆಸನ, 2 ಹಿಂದೆ ಬಾಗಿ ಮಾಡುವ ಆಸನ, 2 ತಿರುಚಿ ಮಾಡುವ ಆಸನ, 2 ಕೈ ಮೇಲೆ ನಿಂತು ಮಾಡುವ ಆಸನ ಮತ್ತು 2 ಒಂದೇ ಕಾಲಿನ ಮೇಲೆ ನಿಂತು ಮಾಡುವ ಆಸನಗಳೊಂದಿಗೆ ಕಡ್ಡಾಯವಾಗಿ ಆ ಪ್ರದರ್ಶಿಸಬೇಕು.

ಆಯೋಜಿಸಬೇಕಾದ ಗುಂಪು ಸ್ಪರ್ಧೆಗಳು: ವಾಲಿಬಾಲ್, ಫುಟ್ಬಾಲ್, ಖೋ-ಖೋ, ಕಬಡ್ಡಿ, ಬ್ಯಾಸ್ಕೆಟ್ಬಾಲ್, ಕುಸ್ತಿ, ಬ್ಯಾಡ್ಮಿಂಟನ್, ಹಾಕಿ, ಹ್ಯಾಂಡ್‌ಬಾಲ್, ಟೇಬಲ್ ಟೆನ್ನಿಸ್, ಥ್ರೋಬಾಲ್, ಬಾಲ್ ಬ್ಯಾಡ್ಮಿಂಟನ್. ಆಯ್ಕೆ ಮಾಡುವ ಕ್ರೀಡೆಗಳು, ಟೆನ್ನಿಸ್, ನೆಟ್‌ಬಾಲ್, ಈಜು.

ಶರತ್ತುಗಳು: ತಾಲೂಕು ಮಟ್ಟದಲ್ಲಿ ನಡೆದ ಕ್ರೀಡೆಗಳಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಕ್ರೀಡಾಪಟುಗಳು ಹಾಗೂ ಗುಂಪು ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳು ಜಿಲ್ಲಾ ಮಟ್ಟದಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಜಿಲ್ಲಾ ಮಟ್ಟದಲ್ಲಿ ನಡೆದ ಕ್ರೀಡೆಗಳಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಕ್ರೀಡಾಪಟುಗಳು ಹಾಗೂ ಗುಂಪು ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳಿಗೆ ವಿಭಾಗ ಮಟ್ಟದಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ದಸರಾ ಕ್ರೀಡಾಕೂಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಕರ್ನಾಟಕ ರಾಜ್ಯದಲ್ಲಿ ವಾಸಿಸುವ ಕ್ರೀಡಾಪಟುಗಳು ಮಾತ್ರ ಅರ್ಹರಿರುತ್ತಾರೆ. ಕ್ರೀಡಾಕೂಟದಲ್ಲಿ ರಕ್ಷಣಾಪಡೆ, ಅರೆರಕ್ಷಣಾಪಡೆ ಸೇರಿದ ಕ್ರೀಡಾಪಟುಗಳು ಭಾಗವಹಿಸಲು ಅರ್ಹರಲ್ಲ.

ಒಬ್ಬ ಕ್ರೀಡಾಪಟು ಅಥವಾ ತಂಡ ಯಾವುದೇ ಜಿಲ್ಲೆಯಲ್ಲಿ ಒಂದು ಬಾರಿ ತಾಲೂಕು ಅಥವಾ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿದ ನಂತರ ಬೇರೆ ಯಾವುದೇ ಜಿಲ್ಲೆಯ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲು ಅವಕಾಶ ಇರುವುದಿಲ್ಲ. ಅಂತಹ ಪ್ರಕರಣವೇನಾದರೂ ದಾಖಲಾದಲ್ಲಿ ಅಥವಾ ಗಮನಕ್ಕೆ ಬಂದಲ್ಲಿ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು. ಈ ಸಂಬಂಧ ಸಹಾಯಕ ನಿರ್ದೇಶಕರು ಕೈಗೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ದೂರವಾಣಿ ಸಂಖ್ಯೆ-08372-238345ಗೆ ಸಂಪರ್ಕಿಸಬಹುದಾಗಿದೆ.

# ಬಿಜೆಪಿ ಯುವ ಮೋರ್ಚಾದಿಂದ ರಕ್ತದಾನ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ




ಜಿಲ್ಲಾ ಬಿಜೆಪಿ ಯುವ ಮೋರ್ಚಾ, ಗದಗ ನಗರ ಮಂಡಲ ಯುವ ಬಿಜೆಪಿ ವತಿಯಿಂದ ಪ್ರಧಾನಿ ನರೇಂದ್ರ ಮೋದಿಯವರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರದಲ್ಲಿ 27 ಜನ ರಕ್ತದಾನವನ್ನು ಮಾಡಿ ಶಿಬಿರವನ್ನು ಯಶಸ್ವಿಗೊಳಿಸಿದರು.

ಜಿಲ್ಲಾ ಯುವ ಬಿಜೆಪಿ ಅಧ್ಯಕ್ಷ ಸಂತೋಷ ಅಕ್ಕಿ ಮಾತನಾಡಿ, ಪ್ರಧಾನಿ ಮೋದಿಯವರ ಜನ್ಮದಿನದ ನಿಮಿತ್ತ ವಿಶಿಷ್ಟ ಕಾರ್ಯಕ್ರಮವನ್ನು ಯುವ ಬಿಜೆಪಿ, ಗದಗ ನಗರ ಬಿಜೆಪಿ ಮತ್ತು ಜಿಲ್ಲೆಯ 9 ಮಂಡಲಗಳ ಯುವ ಬಿಜೆಪಿ ವತಿಯಿಂದ ಯಶಸ್ವಿಗೊಳಿಸಿದ್ದಕ್ಕೆಅಭಿನಂದಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಹಿರಿಯರಾದ ಎಂ.ಎಸ್. ಕರೀಗೌಡ್ರ, ಜಗನ್ನಾಥಸಾ ಭಾಂಡಗೆ, ಗದಗ ನಗರ ಬಿಜೆಪಿ ಅಧ್ಯಕ್ಷ ಅನಿಲ ಅಬ್ಬಿಗೇರಿ, ಸುರೇಶ ಮರಳಪ್ಪನವರ, ಶಶಿಧರ ದಿಂಡೂರ, ರಮೇಶ ಸಜ್ಜಗಾರ, ಉಮೇಶ ಚನ್ನುಪಾಟೀಲ, ಚಂದ್ರು ಕುರಿ, ಕಿರಣ ಕಟ್ಟಿ, ಪ್ರಕಾಶ ಕೊತಂಬರಿ, ರೋಹನ, ನವೀನ ಕೊಟೆಕಲ್, ನವೀನ ಕುರ್ತಕೋಟಿ, ರಾಹುಲ ಸಂಕಣ್ಣವರ, ವಿನಾಯಕ ಹೊರಕೇರಿ, ಶಂಕರ ಕಾಕಿ, ಅವಿನಾಶ ಹೊನಗುಡಿ, ಧರ್ಮದಾಸ, ಅರುಣ ಹುಲ್ಲೂರ, ವಿನೋದ ಹಂಸನೂರ ಮುಂತಾದವರಿದ್ದರು.

# ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ, ರೋಟರಿ ಹಾಗೂ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ಹಾಗೂ ಇನ್ನರ್ ವ್ಹೀಲ್ ಸಂಸ್ಥೆ ಗದಗ ಮಿಡ್‌ಟೌನ್ ಇವುಗಳ ಸಹಯೋಗದಲ್ಲಿ ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಗದುಗಿನ ರೋಟರಿ ಐ ಕೇರ್ ಸೆಂಟರ್‌ನಲ್ಲಿ ಏರ್ಪಡಿಸಲಾಗಿದೆ.

ಈ ಶಸ್ತ್ರ ಚಿಕಿತ್ಸಾ ಶಿಬಿರವನ್ನು ದಿ. ಶ್ರೀಮತಿ ತುಕ್ಕುಬಾಯಿ ನಾರಾಯಣಸಾ ಖಟವಟೆ (ಗುಂಜಿನವರು) ಇವರ ಸ್ಮರಣಾರ್ಥ ವಿಶ್ವನಾಥ ಎನ್.ಖಟವಟೆ (ಗುಂಜಿನವರು) ಮತ್ತು ಮಕ್ಕಳು, ಗದಗ ಇವರ ಪ್ರಾಯೋಜಕತ್ವದಲ್ಲಿ ರೋಟರಿ ಉಚಿತ ಕಣ್ಣಿನ ಆಸ್ಪತ್ರೆ, ಜಿಲ್ಲಾ ಸ್ಟೇಡಿಯಂ ಹತ್ತಿರ, ಗದಗದಲ್ಲಿ ಸೆ.21ರ ಮುಂಜಾನೆ 10 ಗಂಟೆಗೆ ತಪಾಸಣೆ ಹಾಗೂ ಆಯ್ಕೆಯಾದ ರೋಗಿಗಳಿಗೆ ಸೆ.22ರಂದು ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ಕೈಗೊಳ್ಳಲಾಗುವುದು. ತಪಾಸಣೆಗೆ ಬರುವ ರೋಗಿಗಳು ತಮ್ಮ ಆಧಾರ್ ಕಾರ್ಡಿನ ಝರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ತರಬೇಕು.

ಬ್ಲಡ್ ಪ್ರೆಶರ್ ಹಾಗೂ ಸಕ್ಕರೆ ಕಾಯಿಲೆ ಇದ್ದವರಿಗೆ ಅವುಗಳು ನಿಯಂತ್ರಣಕ್ಕೆ ಬರದ ಹೊರತು ಆಪರೇಶನ್ ಮಾಡಲಾಗುವುದಿಲ್ಲ. ಕಾರಣ ಕಣ್ಣಿನ ಪೊರೆ ಬಂದ ರೋಗಿಗಳು ತಮ್ಮ ಹೆಸರನ್ನು ರೋಟರಿ ಐ ಕೇರ್ ಸೆಚಿಟರ್‌ನಲ್ಲಿ (ಸ್ಟೇಡಿಯಂ ಹತ್ತಿರ) ನೋಂದಾಯಿಸಬೇಕೆಂದು ಸಂಸ್ಥೆಯ ಅಧ್ಯಕ್ಷರಾದ ರೊ. ಇಂ. ಶ್ರೀಧರ ಎನ್.ಸುಲ್ತಾನಪೂರ, ಕಾರ್ಯದರ್ಶಿ ರೊ. ಇಂ. ಬಾಲಕೃಷ್ಣ ಕಾಮತ, ಐ.ಒ.ಎಲ್. ಚೇರಮನ್ ರೊ. ಡಾ.ಶೇಖರ ಡಿ.ಸಜ್ಜನರ ವಿನಂತಿಸಿಕೊಂಡಿದ್ದಾರೆ.

# ಮಕ್ಕಳಲ್ಲಿ ಸೌಹಾರ್ದತೆ ಬೆಳೆಯಲಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಆಟಗಳಲ್ಲಿ ಸೋಲು-ಗೆಲುವು ಸಹಜ. ಮಕ್ಕಳಲ್ಲಿ ಸೌಹಾರ್ದಯುತ ಗುಣಗಳನ್ನು ಬಿತ್ತಬೇಕು ಎಂದು ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ್ ತಿಳಿಸಿದರು.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಗುರುವಾರ ನಡೆದ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳ ತಾಲೂಕು ಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಮಕ್ಕಳು ಆರೋಗ್ಯಕರ ಆಹಾರ ಸೇವಿಸುತ್ತಿಲ್ಲ. ಉತ್ತಮ ಆರೋಗ್ಯ ಮತ್ತು ಮಾನಸಿಕ ದೃಢತೆಯನ್ನು ಹೊಂದಲು ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದು ಉತ್ತಮ ಎಂದರು.

ಬಿಇಓ ಲೇಪಾಕ್ಷಪ್ಪ ಮಾತನಾಡಿ, ತಾಲೂಕಿನ ಎಲ್ಲಾ ಶಾಲೆಗಳಿಗೆ ಕ್ರೀಡಾ ಸಾಮಗ್ರಿಗಳಿಗಾಗಿ ಒಂದು ಕೋಟಿಗೂ ಅಧಿಕ ಹಣವನ್ನು ಶಾಸಕರು ನೀಡಿದ್ದಾರೆ. ಓದಿನ ಜೊತೆಗೆ ಮಕ್ಕಳು ಕ್ರೀಡೆಯಲ್ಲಿ ಪಾಲ್ಗೊಂಡು ದೈಹಿಕ, ಮಾನಸಿಕವಾಗಿ ಸದೃಡರಾಗಲು ತಿಳಿಸಿದರು.

ವೇದಿಕೆಯಲ್ಲಿ ಅರ್ಜುನ್ ಪರುಸಪ್ಪ, ಬಿ.ರಾಜಶೇಖರ್, ಪ್ರಾಥಮಿಕ ಕೃಷಿ ಸಹಕಾರ ಪತ್ತಿನ ಬ್ಯಾಂಕ್ ಅಧ್ಯಕ್ಷ ಚಂದ್ರಮೌಳಿ, ಎಂ.ರಮೇಶ್, ಇಸ್ಮಾಯಿಲ್ ಎಲಿಗಾರ್, ಶಿವಾಜಿ ನಾಯ್ಕ, ಪಿ.ಸುಬ್ಬಣ್ಣ ಮುಂತಾದವರಿದ್ದರು. ತಾಲೂಕು ದೈಹಿಕ ಪರಿವೀಕ್ಷಕ ಕೆ.ಷಣ್ಮುಖಪ್ಪ, ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಜಿ.ಮನೋಹರ್, ಪ್ರೌಢಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಗುರುಮೂರ್ತಿ, ಜನಾರ್ಧನ ರೆಡ್ಡಿ, ಗಿರಜ್ಜಿ ಮಂಜುನಾಥ, ಬಿರ್ಸಿ ಹೊನ್ನತ್ತೆಪ್ಪ, ಲತಾ ಟಿ.ಹೆಚ್, ಲತಾ ರಾಥೋಡ್, ಮಕ್ಬುಲ್ ಭಾಷಾ, ಜಯಣ್ಣ ಪೂಜಾರ್ ಮುಂತಾದವರು ಪಾಲ್ಗೊಂಡಿದ್ದರು.

# ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಬಾಲೇಹೊಸೂರು ಶ್ರೀ ಗುರು ದಿಂಗಾಲೇಶ್ವರ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ಸೂರಣಗಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯು ಅತ್ಯಂತ ವಿಜೃಂಭಣೆಯಿಂದ ಜರುಗಿತು.

ಕಾರ್ಯಕ್ರಮದಲ್ಲಿ ಬಿಆರ್‌ಪಿ ಬಿ.ಎಂ. ಯರಗುಪ್ಪಿ ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳಲ್ಲಿರುವ ಸೂಕ್ತ ಪ್ರತಿಭೆ ಹೊರಹೊಮ್ಮಲು ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳನ್ನು ಇಲಾಖೆ ಹಮ್ಮಿಕೊಂಡಿದೆ. ಆದ್ದರಿಂದ ಸೂಕ್ತ ಪ್ರತಿಭೆಗಳನ್ನು ಗುರುತಿಸಿ ನಿಮ್ಮ ನಿರ್ಣಯಕ್ಕೆ ಬೆಲೆ ತರುವಂತೆ ನಿರ್ಣಯ ನೀಡಿ ಎಂದು ನಿರ್ಣಾಯಕರಿಗೆ ಕಿವಿಮಾತು ಹೇಳಿದರು.

ಬಿಆರ್‌ಪಿ ವಾಸು ದೀಪಾಳಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳನ್ನು ಸರ್ವತೋಮುಖ ಅಭಿವೃದ್ಧಿಯತ್ತ ಒಯ್ಯಲು ಇಂತಹ ಕಾರ್ಯಕ್ರಮಗಳು ಮಕ್ಕಳಿಗೆ ಅತಿ ಅವಶ್ಯವೆಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾ.ಪಂ ಅಧ್ಯಕ್ಷ ಪರಶುರಾಮ ಮೈಲಾರಿ ವಹಿಸಿಕೊಂಡಿದ್ದರು.

ಮುಖ್ಯ ಅತಿಥಿಗಳಾಗಿ ಗ್ರಾ.ಪಂ ಸದಸ್ಯರು, ಕಾರ್ಯಕ್ರಮದ ರೂವಾರಿಗಳಾದ ಸೂರಣಿಗಿ, ಸಿಆರ್‌ಪಿ ಲೋಕೇಶ್ ಮಠದ, ಕೋಗುನೂರು ಸಿಆರ್‌ಪಿ ಸತೀಶ್ ಪಶುಪತಿಹಾಳ, ಎಂ.ಎನ್. ಭರಮಗೌಡ್ರು, ಬಸವರಾಜ್ ಹತ್ತಿಕಾಳ, ಎಸ್‌ಡಿಎಂಸಿ ಅಧ್ಯಕ್ಷ ಹಾಲೇಶ್ ಜಾಲವಾಡಗಿ ಉಪಸ್ಥಿತರಿದ್ದರು. ಖಾದರಸಾಬ್ ನದಾಫ್, ತೇಜಸ್ವಿನಿ ಬಡಿಗೇರ, ಮುತ್ತಣ್ಣ ಹುಬ್ಬಳ್ಳಿ, ಸಿದ್ದಪ್ಪ ಸಜ್ಜಗಾರ್ ರಂಜಿತಾ ಮರಳಿಹಳ್ಳಿ ನಿರೂಪಿಸಿದರು.

# ಲಕ್ಕುಂಡಿ ಹಾಲು ಉತ್ಪಾದಕರ ಮಹಿಳಾ ಸಂಘಕ್ಕೆ ಅತ್ಯುತ್ತಮ ಪ್ರಶಸ್ತಿ ಪ್ರದಾನ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ




ಇಲ್ಲಿಯ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಕ್ಕೆ ಧಾರವಾಡ, ಗದಗ ಮತ್ತು ಉತ್ತರ ಕನ್ನಡ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟವು ಅತ್ಯುತ್ತಮ ಪ್ರಶಸ್ತಿಯನ್ನು ನೀಡಿ ಪ್ರೋತ್ಸಾಹಿಸಿತು.

ತೃತೀಯ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಸಂಘದ ಅಧ್ಯಕ್ಷೆ ಶಾರದಾ ಪಾಟೀಲ ಮತ್ತು ಕಾರ್ಯದರ್ಶಿ ಅನ್ನಪೂರ್ಣ ರಿತ್ತಿ ಪ್ರಶಸ್ತಿಯನ್ನು ಸ್ವೀಕರಿಸಿದರು. ಗ್ರಾಮ ಪಂಚಾಯತ ಮಟ್ಟದ ಸಂಜೀವಿನಿ ಯೋಜನೆಯ ಮಹಿಳಾ ಒಕ್ಕೂಟದ ಸಹಯೋಗದಲ್ಲಿ ಸ್ಥಾಪನೆಯಾದ ಮಹಿಳಾ ಸಂಘವು ಕೇವಲ ಎರಡು ವರ್ಷದಲ್ಲಿ ಅಧಿಕ ಹಾಲು ಉತ್ಪಾದನೆ ಮಾಡಿದ್ದಕ್ಕಾಗಿ ಒಕ್ಕೂಟದ ಅಧ್ಯಕ್ಷ ಶಂಕರ ಮುಗದ, ವ್ಯವಸ್ಥಾಪಕ ನಿರ್ದೇಶಕ ಡಾ. ವೀರೇಶ ತರಲಿ ಹಾಗೂ ಹನುಮಂತಗೌಡ್ರ ಹಿರೇಗೌಡ್ರ ಅವರು ಧಾರವಾಡ ಹಾಲು ಒಕ್ಕೂಟದ ನಂದಿನಿ ಸಭಾಭವನದಲ್ಲಿ ನಡೆದ ವಾರ್ಷಿಕ ಸಭೆಯಲ್ಲಿ ಪ್ರಶಸ್ತಿಯನ್ನು ನೀಡಿ ಗೌರವಿಸಿದರು. ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿಯಲ್ಲಿ ಹೆಚ್ಚು ಅಂಕ ಪಡೆದ ಸಂಘದ ಕಾರ್ಯದರ್ಶಿ ಅನ್ನಪೂರ್ಣ ರಿತ್ತಿಯವರ ಪುತ್ರ ಕಿರಣ ರಿತ್ತಿಗೆ 10 ಸಾವಿರ ರೂ ಚೆಕ್ ನೀಡಿ ಪುರಸ್ಕರಿಸಲಾಯಿತು.

### ಗದಗ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ ಕರೆ

# ಕ್ರೀಡೆಯೊಂದಿಗೆ ಬದುಕು ರೂಪಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಕ್ರೀಡೆ ಸಹಕಾರಿಯಾಗಲಿದೆ. ವಿದ್ಯಾರ್ಥಿಗಳು ಸತತ ಪ್ರಯತ್ನ ಮಾಡಿ ಸಕ್ರಿಯವಾಗಿ ಕ್ರೀಡೆಗಳಲ್ಲಿ ಭಾಗವಹಿಸಿದಾಗ ಮಾತ್ರ ದೈಹಿಕ, ಮಾನಸಿಕವಾಗಿ ಸದೃಢವಾಗಲು ಸಾಧ್ಯ ಎಂದು ಶಾಲಾ ಶಿಕ್ಷಣ ಇಲಾಖೆ, ಗದಗ ಜಿಲ್ಲಾ ಉಪ ನಿರ್ದೇಶಕರಾದ ಜಿ.ಎಲ್. ಬಾರಾಟಕ್ಕೆ ಹೇಳಿದರು.

ಅವರು ಶುಕ್ರವಾರ ಗದಗ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಗದಗ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಹರ ವಲಯ ಗದಗ ಹಾಗೂ ಗದಗ ಶಹರ ವಲಯದ ತಾಲೂಕಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ 2024–25ನೇ ಸಾಲಿನ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಗದಗ ತಾಲೂಕು ಮಟ್ಟದ ಕ್ರೀಡಾಕೂಟದ ಕ್ರೀಡಾ ಧ್ವಜಾರೋಹಣ ಮತ್ತು ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು.




ಯಾರ ದೇಹ ಸದೃಢವಾಗಿರುತ್ತದೆಯೋ, ಅವರ ಮನಸ್ಸು ಕೂಡ ಸದೃಢವಾಗಿರುತ್ತದೆ. ಹೀಗಿದ್ದಾಗ ಮಾತ್ರ ಶೈಕ್ಷಣಿಕವಾಗಿ ಮುಂದೆ ಬರಲು ಸಾಧ್ಯ. ನಿರ್ಣಾಯಕರು ಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸಿ ಪಾರದರ್ಶಕವಾಗಿ ನಿರ್ಣಯ ನೀಡಬೇಕು. ಕ್ರೀಡಾಪಟುಗಳು ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಿ ನಿಮ್ಮ ಬದುಕನ್ನು ರೂಪಿಸಿಕೊಳ್ಳಿ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಗದಗ ತಾಲೂಕು ಅಕ್ಷರ ದಾಸೋಹ ಅಧಿಕಾರಿ ಶಂಕರ ಹಡಗಲಿ, ಗದಗ ಜಿಲ್ಲಾ ಪ್ರವಾಸೋದ್ಯಮ ಇಲಾಖೆ ಅಧಿಕಾರಿ ಕೊಟ್ರೇಶ ವಿಭೂತಿ, ಗದಗ ಶಹರ ವಲಯದ ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಪಿ. ಪ್ರಭಯ್ಯನಮಠ, ರಾಷ್ಟ್ರಪ್ರಶಸ್ತಿ ವಿಜೇತ ಶಿಕ್ಷಕ ಎಸ್.ಎನ್. ಬಳ್ಳಾರಿ, ಗದಗ ಗ್ರಾಮೀಣ ದೈಹಿಕ ಶಿಕ್ಷಣಾಧಿಕಾರಿ ಟಿ.ಎಸ್. ಪವಾರ, ಎಂ.ಎಸ್. ಕುಚಬಾಳ, ಶರಣಪ್ಪ ನಾಗರಳ್ಳಿ, ಎಸ್.ಎಂ. ಪೂಜಾರ, ಎಸ್.ಕೆ. ಮಂಗಳಗುಡ್ಡ, ರವಿ ಕೋಟಿ, ಡಿ.ಬಿ. ಮೆಣಸಿನಕಾಯಿ, ಎಸ್.ಎಂ. ಉಮ್ಮಣ್ಣವರ, ಎಸ್.ಎಂ. ಮಾಶಾಳ, ಚಂದ್ರಕಾಂತ ಕಬಾಡಿ ಮುತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಕ್ರೀಡಾ ಜ್ಯೋತಿ ಸ್ವೀಕರಿಸಿದ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಮಾತನಾಡಿ, ಒಲಿಂಪಿಕ್ ಹಾಗೂ ಪ್ಯಾರಾ ಒಲಿಂಪಿಕ್‌ಗಳಲ್ಲಿ ಭಾಗವಹಿಸಿದ ಕ್ರೀಡಾಪಟುಗಳ ಸಾಧನೆಗಳನ್ನು ವಿದ್ಯಾರ್ಥಿಗಳು ಪ್ರೇರಣೆಯಾಗಿ ಪಡೆದು ಕ್ರೀಡೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ವಿಜೇತರಾಗಿ ಗದಗ ಜಿಲ್ಲೆಗೆ ಕೀರ್ತಿ ತರುವಂತೆ ಕರೆ ನೀಡಿದರಲ್ಲದೆ, ಹಲವಾರು ಇಲಾಖೆಗಳಲ್ಲಿ ಕ್ರೀಡಾ ಮೀಸಲಾತಿಯಲ್ಲಿ ಉದ್ಯೋಗ ಅವಕಾಶಗಳಿದ್ದು, ಕ್ರೀಡಾಪಟುಗಳು ಇದರ ಉಪಯೋಗ ಪಡೆಯಬೇಕು ಎಂದರು.

ಗದಗ ತಾಲೂಕಿನ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳು ಕ್ರೀಡಾಕೂಟದಲ್ಲಿ ಭಾಗವಹಿಸಿದ್ದರು. ದೈಹಿಕ ಶಿಕ್ಷಣ ಶಿಕ್ಷಕ ಮುಳಗುಂದ ಪ್ರತಿಜ್ಞಾವಿಧಿ ಬೋಧಿಸಿದರು. ಎಸ್.ಎಂ. ಉಮ್ಮಣ್ಣವರ ನಿರೂಪಿಸಿದರು. ಗದಗ ಶಹರ ದೈಹಿಕ ಶಿಕ್ಷಣ ಅಧಿಕಾರಿ ಜೆ.ಬಿ. ಅಣ್ಣಿಗೇರಿ ಸ್ವಾಗತಿಸಿ ವಂದಿಸಿದರು.



ಮುಂಡರಗಿ ಪಟ್ಟಣದ ಎಂ.ಎಸ್. ಡಂಬಳ ಹೆಣ್ಣುಮಕ್ಕಳ ಪ್ರೌಢಶಾಲೆಯಲ್ಲಿ ಶಿಕ್ಷಣ ಇಲಾಖೆಯಿಂದ ಮುಂಡರಗಿ ಪಶ್ಚಿಮ ಕ್ಲಸ್ಟರ್ ಮಟ್ಟದ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವದಲ್ಲಿ ಪಟ್ಟಣದ ಜಗದ್ಗುರು ಅನ್ನದಾನೀಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ 3ನೇ ತರಗತಿ ವಿದ್ಯಾರ್ಥಿನಿ ಖುಷಿ ಮುರಡಿ 'ಅಭಿಯನ ಗೀತೆ' ವೈಯಕ್ತಿಕ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದುಕೊಂಡಿದ್ದಾಳೆ ಎಂದು ಪ್ರಕಟಣೆ ತಿಳಿಸಿದೆ.

## ಅವಧಿ ವಿಸ್ತರಣೆ


**■ವಿಜಯಸಾಕ್ಷಿ ಸುದ್ದಿ, ಗದಗ**

2024–25ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ ಅರೆ ಅಲೆಮಾರಿ ಪ್ರವರ್ಗ–1ರ ವಿದ್ಯಾರ್ಥಿಗಳಿಂದ ಅರ್ಹ ಪಿಯುಸಿ ಸಮಾನಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸ್‌ಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಶುಲ್ಕ ವಿನಾಯತಿ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಕೊನೆಯ ದಿನವನ್ನು ಅಕ್ಟೋಬರ್ 15ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಗದಗ ಈ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.



ಗದುಗಿನ ಎಸ್‌ಎಸ್‌ಕೆ ಶಾಲೆಯಲ್ಲಿ ನಡೆದ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ಜೆ.ಯು ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿ, ಪ್ರಶಸ್ತಿ ಪಡೆದು ಶಾಲೆಯ ಕೀರ್ತಿ ಹೆಚ್ಚಿಸಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ಜೆ.ಎಚ್. ಉಮಚಗಿ ಅಭಿನಂದಿಸಿ, ಮುಂದೆ ತಾಲೂಕು ಮಟ್ಟದಲ್ಲಿ ಭಾಗವಹಿಸಿ ಸಾಧನ ಮಾಡಿ ಎಂದು ಹಾರೈಸಿದರು. ಶಾಲೆಯ ಮುಖ್ಯ ಗುರುಮಾತೆ ಶ್ರೀಮತಿ ಗುದಗಿ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳಿದ್ದರು.



ಲಕ್ಷ್ಮೇಶ್ವರದಲ್ಲಿ ಇತ್ತೀಚೆಗೆ ನಡೆದ ಕಳ್ಳತನ ಪ್ರಕರಣವನ್ನು ಬೇಧಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಮಾರುತಿ ಜೋಗದಂಡಕರ ಅವರು ರಾಜೀವಗಾಂಧಿ ನಗರದ ಬಡಾವಣೆಯ ಪಿಎಸ್‌ಐ ಆಗಿ ಅಧಿಕಾರ ಸ್ವೀಕರಿಸಿದ ಹಿನ್ನೆಲೆಯಲ್ಲಿ ಗದಗ ನಗರದ ಗಂಗಾಪೂರ ಪೇಟೆಯ ಮಡಿವಾಳ ಮಾಚಿದೇವ ಸಮಾಜ ಬಾಂಧವರಾದ ಶಿವಾಜಿ ಮಡಿವಾಳರ, ಭಿಮಸಿ ಮಡಿವಾಳರ ನೇತೃತ್ವದ ನಿಯೋಗ ಸನ್ಮಾನಿಸಿ, ಗೌರವಿಸಿ, ಅಭಿನಂದಿಸಿತು.



ಮುಳಗುಂದ ಪಟ್ಟಣ ಸಮೀಪದ ಹುಲಕೋಟಿ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆಯು ವಿದ್ಯಾರ್ಥಿಗಳ ತಂಡ ವಾಲಿಬಾಲ್‌ನಲ್ಲಿ ತಾಲೂಕಾ ಮಟ್ಟದಲ್ಲಿ ಪ್ರಥಮ ಸ್ಥಾನ ಗಳಿಸುವ ಮೂಲಕ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿರುವುದಕ್ಕೆ ಶಾಲಾ ಶಿಕ್ಷಕರ ವೃಂದ ಹಾಗೂ ಎಸ್‌ಡಿಎಂಸಿ ಅಧ್ಯಕ್ಷರು ಸರ್ವ ಸದಸ್ಯರು ವಿದ್ಯಾರ್ಥಿಗಳನ್ನು ಅಭಿನಂದಿಸಿ ಗೌರವಿಸಿದ್ದಾರೆ.

## ಸರ್ವತೋಮುಖ ಬೆಳವಣಿಗೆಗೆ ಕ್ರೀಡೆ ಸಹಕಾರಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಕ್ರೀಡೆ ಸಹಕಾರಿಯಾಗಿದೆ ಎಂದು ದೈಹಿಕ ಶಿಕ್ಷಕ ಎನ್.ವಾಯ್. ಸಂಗೊಂದಿ ಹೇಳಿದರು.

ಅವರು ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾ ವಿದ್ಯಾಲಯದಲ್ಲಿ ವಿವಿಧ ಕ್ರೀಡಾಕೂಟದಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳನ್ನು ಗೌರವಿಸಿ ಮಾತನಾಡಿ, ಕ್ರೀಡೆಯಲ್ಲಿ ಭಾಗವಹಿಸುವುದರಿಂದ ದೈಹಿಕ ಹಾಗೂ ಮಾನಸಿಕವಾಗಿ ವಿದ್ಯಾರ್ಥಿಗಳು ಸಧೃಢರಾಗಲು ಸಹಕಾರಿಯಾಗುತ್ತದೆ ಹಾಗೂ ಭವಿಷ್ಯದ ಉತ್ತಮ ಜೀವನಕ್ಕೆ ಸಹಕಾರಿಯಾಗುತ್ತದೆ ಎಂದರು.

ಎಸ್.ಆರ್. ಹಿರೇಗೌಡ್ರ ಮಾತನಾಡಿ, ನಮ್ಮ ಕಾಲೇಜಿನ ವಿದ್ಯಾರ್ಥಿಗಳು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿರುವುದು ನಮ್ಮ ಸಂಸ್ಥೆಗೆ ಹೆಮ್ಮೆಯಾಗುತ್ತದೆ. ಮಕ್ಕಳು ಕಲಿಕೆಯ ಜೊತೆಯಲ್ಲಿ ಕ್ರೀಡೆಯಲ್ಲಿ ಭಾಗವಹಿಸಲು ಎಂದೂ ಹಿಂಜರಿಯಬಾರದು ಎಂದರು.

ಪ್ರಾಚಾರ್ಯ ಎ.ಎಂ. ಅಂಗಡಿ, ಶಿಕ್ಷಣ ಸಂಸ್ಥೆಯ ಚೇರಮನ್ ಎಂ.ಡಿ. ಬಟ್ಟೂರ, ಆರ್.ಆರ್. ಪಟ್ಟಣ, ಇ.ಎಂ. ಗುಳೆದಗುಡ್ಡ, ಸಿ.ಎಚ್. ದೊಡ್ಡಮನಿ, ಎಸ್.ಪಿ. ಶಿರೂರ ಸೇರಿದಂತೆ ಕಾಲೇಜು ಉಪನ್ಯಾಸಕರು ಇದ್ದರು.

# ಪೋಷಣ ಮಾಸಾಚರಣೆ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಹಾಗೂ ಶಿಶು ಅಭಿವೃದ್ಧಿ ಯೋಜನೆ ಗದಗ ಇವರ ಸಂಯುಕ್ತಾಶ್ರಯದಲ್ಲಿ ಹುಲಕೋಟಿ ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ–298ರಲ್ಲಿ ಬುಧವಾರ ಪೋಷಣ ಮಾಸಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪೋಷಣ ಮಾಸಾಚರಣೆ ಕಾರ್ಯಕ್ರಮದ ಕುರಿತಾದ ಪೌಷ್ಠಿಕ ಆಹಾರವನ್ನು ಮಕ್ಕಳು, ಗರ್ಭಿಣಿ, ಬಾಣಂತಿಯರು ಸರಿಯಾಗಿ ಸೇವಿಸಬೇಕು. ನಮ್ಮ ಹಾಗೂ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿರಿಸಿಕೊಳ್ಳಬೇಕು. ಇದರಿಂದ ರೋಗ ರುಜಿನಗಳನ್ನು ತಡೆಗಟ್ಟಿ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಶಿಶು ಅಭಿವೃದ್ಧಿ ಯೋಜನೆ ಸಂರಕ್ಷಣಾಧಿಕಾರಿ ರಾಜೇಶ್ವರಿ ಮೇಟಿ ಮಾತನಾಡಿ, ಸೆಪ್ಟೆಂಬರ್ ಮಾಹೆಯಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಮಕ್ಕಳ ಪೌಷ್ಠಿಕತೆ, ಗರ್ಭಿಣಿ ಬಾಣಂತಿ ಹಾಗೂ ಕಿಶೋರಿಯರಲ್ಲಿನ ರಕ್ತಹೀನತೆ ಹಾಗೂ ಇಲಾಖೆಯ ವಿವಿಧ ಯೋಜನೆಯ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಮಾತೃವಂದನಾ ಸಂಯೋಜಕರಾದ ಎಸ್.ಜಿ. ಪೂಜಾರ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುಳಾ ಕಮತ್ ಮಾತನಾಡಿದರು. ಪ್ರಮುಖರಾದ ನಾಗರತ್ನಾ ಬಾಳಿಹಳ್ಳಿಮ್ಮಠ, ಶ್ರೀದೇವಿ ಕೋರಿ, ಕಮಲಾಕ್ಷಿ ಹಳ್ಳಿ, ದ್ಯಾಮವ್ವ ಮಡಿವಾಳರ, ಮಲ್ಲಮ್ಮ ಯಲಿಶೇಟ್ಟರ, ಬಸಮ್ಮ ಪವಾಡಣ್ಣವರ, ರೇಣುಕಾ ಹಡಪದ, ಕವಿತಾ ಶ್ಯಾವನಾಳಮಠ ಪಾಲ್ಗೊಂಡಿದ್ದರು.

ಎಸ್.ಜಿ. ಪೂಜಾರ, ಪವನ ಕಾಟೀಗರ, ವಿನೋದಾ ಹೊಂಬಳ, ಕಾವೇರಿ ಚೇಗೂರ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಗರ್ಭಿಣಿಯರು, ತಾಯಂದಿರು, ಮಕ್ಕಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ಸ್ತ್ರೀಶಕ್ತಿ ಗುಂಪಿನ ಸದಸ್ಯರು ಭಾಗವಹಿಸಿದ್ದರು. ಜ್ಯೋತಿ ಶಿವಶಿಂಪಿಗೇರ ಪ್ರಾರ್ಥಿಸಿದರು. ಪೂರ್ಣಿಮಾ ಪತ್ತಾರ ಸ್ವಾಗತಿಸಿದರು, ವಿನೋದಾ ಹೊಂಬಳ ನಿರೂಪಿಸಿದರು.

## ಪೋಸ್ಟ್ ಡಿಪ್ಲೋಮಾ ಕೋರ್ಸ್: ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಹುಬ್ಬಳ್ಳಿಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ)ಯಲ್ಲಿ ಹೊಸದಾಗಿ ಪ್ರಾರಂಭಿಸಲಾಗಿರುವ ಒಂದು ವರ್ಷ ಅವಧಿಯ ಪೋಸ್ಟ್ ಡಿಪ್ಲೊಮಾ ಇನ್ ಮೆಕಟ್ರಾನಿಕ್ಸ್ ವೃತ್ತಿ ತರಬೇತಿಯ ಪ್ರವೇಶಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮೆಕ್ಯಾನಿಕಲ್, ಆಟೊಮೊಬೈಲ್, ಎಲೆಕ್ಟ್ರಿಕಲ್, ಮೆಕಟ್ರಾನಿಕ್ಸ್ ಮತ್ತು ಎಲೆಕ್ಟ್ರಾನಿಕ್ಸ್ ವಿಷಯಗಳಲ್ಲಿ ಡಿಪ್ಲೋಮಾ ಅಥವಾ ಇಂಜಿನಿಯರಿಂಗ್ (ಬಿ.ಇ) ಉತ್ತೀರ್ಣರಾದ ಅಭ್ಯರ್ಥಿಗಳು ಈ ತರಬೇತಿ ಪಡೆಯಲು ಅರ್ಹರಿರುತ್ತಾರೆ.

ಒಂದು ವರ್ಷ ಅವಧಿಯ ಈ ಕೋರ್ಸ್‌ನಲ್ಲಿ ಎಲೆಕ್ಟ್ರಿಕಲ್ ಇನ್‌ಸ್ಟಾಲೇಶನ್, ಎಲೆಕ್ಟ್ರಿಕಲ್ ಪ್ಯಾನೆಲ್ ಡಿಸೈನ್, ಮೆಕ್ಯಾನಿಕಲ್ ಆಂಡ್ ಸಿಸ್ಟಮ್ ಡಿಸೈನ್, ಪಿಎಲ್‌ಸಿ, ಸ್ಕಾಡಾ, ಅಟೊಮೇಶನ್, ಸಿಎನ್‌ಸಿ ಮೈಂಟೇನನ್ಸ್, ಇಂಟರ್ನೆಟ್‌ಆಫ್‌ಥಿಂಗ್ಸ್ (ಐಓಟಿ), ರೋಬೋಟಿಕ್ಸ್ ಮತ್ತು ಪ್ರೊಜೆಕ್ಟ್ ಡೆವಲಪ್‌ಮೆಂಟ್ ವಿಷಯಗಳಲ್ಲಿ ಪರಿಣಿತಿ ಹೊಂದುವಷ್ಟು ಪ್ರಾಯೋಗಿಕ ತರಬೇತಿ ನೀಡಲಾಗುತ್ತದೆ. ತರಬೇತಿಯ ಕೊನೆಯಲ್ಲಿ ಕ್ಯಾಂಪಸ್ ಸಂದರ್ಶನಗಳ ಮೂಲಕ ಪ್ರತಿಷ್ಠಿತ ಕೈಗಾರಿಕೆಗಳಲ್ಲಿ ಉದ್ಯೋಗ ಅವಕಾಶ ಕಲ್ಪಿಸಲಾಗುವುದು. ಜಿಟಿಟಿಸಿ ಸಂಸ್ಥೆಯು ಉನ್ನತ ತಂತ್ರಜ್ಞಾನ ಮತ್ತು ಮೂಲ ಸೌಕರ್ಯಗಳನ್ನು ಅಳವಡಿಸಿಕೊಂಡಿದ್ದು ವೃತ್ತಿಪರ ತರಬೇತಿಗಳಿಗೆ ಹೆಸರುವಾಸಿಯಾಗಿದೆ.

ಪೋಸ್ಟ್ ಡಿಪ್ಲೊಮಾ ಇನ್ ಮೆಕಟ್ರಾನಿಕ್ಸ್ ತರಬೇತಿಯು ಅಕ್ಟೋಬರ್ 1ರಿಂದ ಪ್ರಾರಂಭವಾಗಲಿದೆ.

ಆಸಕ್ತ ಅಭ್ಯರ್ಥಿಗಳು ಸೆಪ್ಟೆಂಬರ್ 30ರೊಳಗಾಗಿ ಪ್ರವೇಶ ಪಡೆದುಕೊಳ್ಳಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಟಿಟಿಸಿ, ಇಂಡಸ್ಟ್ರಿಯಲ್ ಎಸ್ಟೇಟ್, ಗೋಕುಲ ರಸ್ತೆ, ಹುಬ್ಬಳ್ಳಿ ದೂರವಾಣಿ ಸಂ. 8183860552 / 0836–2333159/155267 ಸಂಪರ್ಕಿಸಬಹುದಾಗಿದೆ ಎಂದು ಹುಬ್ಬಳ್ಳಿ ಜಿಟಿಟಿಸಿ ಪ್ರಿನ್ಸಿಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಅಗ್ನಿವೀರ ಡೆಮೋ ರ್‍ಯಾಲಿ : ಕೆ. ರಾಘವೇಂದ್ರ




**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಜೈ ನರೇಂದ್ರ ಯುವಜನ ಹಿತ ಸಂಸ್ಥೆ ಬಾಗಲಕೋಟೆ ಹಾಗೂ ಶ್ರೀ ಮಳೇಮಲ್ಲೇಶ್ವರ ದೇವಸ್ಥಾನ ಸಮಿತಿ, ಕೊಪ್ಪಳ ಸಹಯೋಗದೊಂದಿಗೆ ಯುವ ಮಾರ್ಗ ಉಚಿತ ಸೈನಿಕ ತರಬೇತಿ ಕೇಂದ್ರ ಇವರಿಂದ ಬೆಳಗಾವಿ ಎಆರ್‌ಒ ವಿದ್ಯಾರ್ಥಿಗಳಿಗೆ ಉಚಿತ ಅಗ್ನಿವೀರ ಡೆಮೋ ರ್‍ಯಾಲಿಗೆ ಸೆ.22 ಚಾಲನೆ ದೊರಕಲಿದೆ ಎಂದು ಯುವ ಮಾರ್ಗದ ಮುಖ್ಯ ತರಬೇತಿದಾರ ಕೆ. ರಾಘವೇಂದ್ರ ತಿಳಿಸಿದರು.

ನಗರದ ಕೆಯೂಡಬ್ಲ್ಯೂಜೆ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ ಈ ರ್‍ಯಾಲಿಯಲ್ಲಿ ಮಳೆ ಮಲ್ಲೇಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷ ಗವಿಸಿದ್ದಯ್ಯ ಹಿರೇಮಠ, ಗದಗ ಜಿಲ್ಲೆಯ ಮಾಜಿ ಸೈನಿಕರು ಪಾಲ್ಗೊಳ್ಳುವರು, ನಗರದ ಹೊರವಲಯದ ಮಳೇ ಮಲ್ಲೇಶ್ವರ ದೇವಸ್ಥಾನ ಸಭಾ ಭವನ ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದ್ದು

ತರಬೇತಿಯಲ್ಲಿ ಕೋಚಿಂಗ್, ಮೋಟವೆಟ್ ಕ್ಲಾಸ್, ವೀಕ್ಲಿ ಡೆಮೋಯರ್ಾಕ್, ಊಟ–ವಸತಿ, ಡೇಸ್, ನಿಕ್ಯಾಪ್, ಯೋಗ ಕ್ಲಾಸ್, (ಬುಕ್ ಹಾಗೂ ಪೆನ್ ಕೊಡಲಾಗುವದು.ಡೆಮೋ ರ್‍ಯಾಲಿಗೆ ಆಯ್ಕೆಯಾದ 100 ವಿದ್ಯಾರ್ಥಿಗಳಿಗೆ 60 ದಿನ ಉಚಿತ ತರಬೇತಿ ನೀಡಲಾಗುವುದು ಎಂದರು.

ಹೆಚ್ಚಿನ ಮಾಹಿತಿಗಾಗಿ ಕೆ. ರಾಘವೇಂದ್ರ ಮುಖ್ಯ ತರಬೇತಿದಾರರು ದೂರವಾಣಿ ಸಂಖ್ಯೆ : 9606816822 ಸಂಪರ್ಕಿಸಬಹುದು.

### ವಿದ್ಯಾರ್ಥಿಗಳು ಸಲ್ಲಿಸಲು ಬೇಕಾದ ದಾಖಲೆ

ಪರೀಕ್ಷೆಯ ಹಾಲ್ ಟಿಕೆಟ್, ಎಕ್ಸಾಮ್ ಪಾಸ್ ಪ್ರೂಫ್, ಆಧಾರ್ ಕಾರ್ಡ್, ಫೋಟೋ ವಾಟ್ಸಪ್ ಮೂಲಕ ಅರ್ಜಿ ಸಲ್ಲಿಸಬೇಕು ಡೆಮೋ ರ್‍ಯಾಲಿಯಲ್ಲಿ ಆಯ್ಕೆಯಾದ, ವಿದ್ಯಾರ್ಥಿಗಳು 60ದಿನದ ಪೌಷ್ಠಿಕ ಆಹಾರದ ರೂಪಾಯಿ 7200 ಮಾತ್ರ ಬರಿಸಬೇಕು ಎಂದರು.



ಮುಳಗುಂದ ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ (ಡಿಪಿಇಪಿ) ಶಾಲೆಯ ವಿದ್ಯಾರ್ಥಿನಿ ಅಂಜುಮಾ ಸಂದಿಗವಾಡ 400ಮೀ ಓಟದಲ್ಲಿ ಪ್ರಥಮ ಹಾಗೂ ಶೃತಿ ರಾಯನಗೌಡರ ತೃತೀಯ ಸ್ಥಾನ ಪಡೆಯುವ ಮೂಲಕ ಜಿಲ್ಲಾ ಮಟ್ಟದ ದಸರಾ ಕ್ರೀಡಾ ಕೂಟಕ್ಕೆ ಆಯ್ಕೆಯಾಗಿರುವುದಕ್ಕೆ ಶಾಲಾ ಶಿಕ್ಷಕರ ವೃಂದ ಹಾಗೂ ಎಸ್‌ಡಿಎಂಸಿ ಸರ್ವ ಸದಸ್ಯರು ಅಭಿನಂದಿಸಿದ್ದಾರೆ.

## ನಿಧನ ವಾರ್ತೆ

### ಮಲ್ಲಮ್ಮ ಕುಂಬಾರ



ಲಕ್ಕುಂಡಿ: ಇಲ್ಲಿಯ ಕುಂಬಾರ ಓಣಿಯ ನಿವಾಸಿ, ಗ್ರಾ.ಪಂ ಮಾಜಿ ಸದಸ್ಯರಾದ ಮಲ್ಲಮ್ಮ ಈರಪ್ಪ ಕುಂಬಾರ(75) ಶುಕ್ರವಾರ ನಿಧನರಾದರು. ಮೃತರು 4 ಜನ ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ.

### ಜಾನಮ್ಮ ಹಿರೇಗೌಡ್ರ



ಕುಂದಗೋಳ: ತಾಲೂಕಿನ ಗುಡಗೇರಿ ಗ್ರಾಮದ ಹಿರಿಯರಾದ ಶ್ರೀಮತಿ ಜಾನಮ್ಮ ಕೊಂ ವೀರನಗೌಡ ಹಿರೇಗೌಡ್ರ ಇವರು ದಿ. 19–09–2024ರಂದು ತಮ್ಮ 90ನೇ ವಯಸ್ಸಿನಲ್ಲಿ ಶಿವನಲ್ಲಿ ಲೀನರಾದರು.

ಮೃತರು 9 ಜನ ಪುತ್ರರು, ಓರ್ವ ಪುತ್ರಿ , ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.



ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯಲ್ಲಿ ತಾಲೂಕು ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷರಾದ ಅಶೋಕ ಮಂದಾಲಿ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಗ್ಯಾರಂಟಿ ಸಮಿತಿಯ ಸದಸ್ಯರು ಹಾಗೂ ಸಂಬಂಧಿತ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಗಾಗ್ಸ್ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಡಾ. ಯೋಗಾನಂದ ರೆಡ್ಡಿ ಅಭಿಮತ

# ವೈದ್ಯರಿಗೆ ಗೌರವದ ಸ್ಥಾನವಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ವೈದ್ಯರು ರೋಗಿಗಳೊಂದಿಗೆ ಸೌಜನ್ಯ ಹಾಗೂ ವಿನಮ್ರತೆಯಿಂದ ವರ್ತಿಸುವ ಮೂಲಕ ನೋವಿನಿಂದ ಬಂದವರಿಗೆ ಸಾಂತ್ವನದಿಂದ ಚಿಕಿತ್ಸೆ ನೀಡಿ ಧನ್ಯತೆಯನ್ನು ಕಾಣಬೇಕೆಂದು ಹಿರಿಯ ತಜ್ಞ ವೈದ್ಯ, ಕೆ.ಎಂ.ಸಿ ಅಧ್ಯಕ್ಷ ಡಾ. ಯೋಗಾನಂದ ರೆಡ್ಡಿ ಹೇಳಿದರು.

ಅವರು ಶುಕ್ರವಾರ ಗದಗ ಐಎಂಎ ಸಭಾಂಗಣದಲ್ಲಿ ನಡೆದ ಗದಗ ಪ್ರಸೂತಿ ಹಾಗೂ ಸ್ತ್ರೀರೋಗ ತಜ್ಞರ ಸೊಸೈಟಿ (ಗಾಗ್ಸ್) ಯ ನೂತನ ಪದಾಧಿಕಾರಿಗಳ ಪದಗ್ರಹಣ ನೆರವೇರಿಸಿ ಮಾತನಾಡಿದರು.

ಸಮಾಜದಲ್ಲಿ ವೈದ್ಯರಿಗೆ ಗೌರವದ ಸ್ಥಾನವಿದೆ. ವೈದ್ಯರನ್ನು ದೇವರೆಂದೇ ಬಣ್ಣಿಸಲಾಗಿದೆ. ನಮ್ಮ ವೈದ್ಯಕೀಯ ಸೇವೆ ಚೆನ್ನಾಗಿರಬೇಕು. ನಮ್ಮ ವಿದ್ವತ್, ಹುಮ್ಮಸ್ಸು, ಅಹಂಕಾರ ಸಲ್ಲದು. ವೈದ್ಯರಾದವರು ಸದಾಕಾಲ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಿ ಅವರನ್ನು ಬದುಕಿಸಬೇಕೆಂದು ಪ್ರಯತ್ನಿಸುವರು. ಕೆಲವೊಮ್ಮೆ ರೋಗಿಯ ರೋಗ ಉಲ್ಬಣಗೊಂಡಿದ್ದರೆ ಬದುಕಿಸಲಾಗದು. ಆಗ ವೈದ್ಯರ ನಿರ್ಲಕ್ಷ್ಯ ಎಂಬ ಆರೋಪ, ದೂರುಗಳು ಬರುತ್ತವೆ. ಇವು ಭಾವುಕತನದ ಆರೋಪಗಳಾದರೂ ಇಂತಹ ಆರೋಪಗಳನ್ನು ಅಲ್ಲಗಳೆಯುವಂತಿಲ್ಲ ಎಂದರು.

ವೈದ್ಯರು ಯಾವುದೇ ಒತ್ತಡಗಳಿಲ್ಲದೆ ಆಸ್ಪತ್ರೆಯಲ್ಲಿ ಶಾಂತಚಿತ್ತದಿಂದ ವರ್ತಿಸಬೇಕು. ರೋಗಿಗಳಿಗೆ, ಆಸ್ಪತ್ರೆಯ ಸಿಬ್ಬಂದಿಗೆ ಸೂಕ್ತ ಮಾರ್ಗದರ್ಶನ ನೀಡಿ ಎಲ್ಲವನ್ನು ಸರಿದೂಗಿಸಿಕೊಂಡು ಮುನ್ನಡೆಬೇಕು. ಗದಗ ಪರಿಸರದಲ್ಲಿ ಹಿರಿಯ ವೈದ್ಯರ ಪಡೆಯೇ ಇದೆ. ಅವರ ಮಾರ್ಗದರ್ಶನದಲ್ಲಿ ಯುವ ವೈದ್ಯರು ಉತ್ತಮ ರೀತಿಯಲ್ಲಿ ಸೇವೆ ಸಲ್ಲಿಸಲಿ, ನೂತನ ಪದಾಧಿಕಾರಿಗಳು ಕ್ರಿಯಾಶೀಲತೆಯಿಂದ ಕಾರ್ಯ ಮಾಡಲಿ ಎಂದರು.

ಉದ್ಘಾಟನೆ ನೆರವೇರಿಸಿ 'ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವಿಕೆ' ವಿಷಯವಗಿ ಮಾತನಾಡಿದ ರಾಜ್ಯ ಕಸೂಗಾ ಅಧ್ಯಕ್ಷೆ ಡಾ.ಭಾರತಿ ರಾಜಶೇಖರ ಕ್ಯಾನ್ಸರ್ ಬಗ್ಗೆ ಭಯ ಬೇಡ, ಆದರೆ ಜಾಗ್ರತಿ ಅವಶ್ಯ. ಕ್ಯಾನ್ಸರ್ ವ್ಯಾಕ್ಸಿನ್ ಈಗಾಗಲೇ ವೈದ್ಯಕೀಯ ರಂಗವನ್ನು ಪ್ರವೇಶಿಸಿದ್ದು, ಕೊಂಚ ದುಬಾರಿ ಎನ್ನಿಸಿದರೂ ಪರಿಣಾಮ ಬಿರುತ್ತಿರುವ ಬಗ್ಗೆ ವರದಿಗಳಿವೆ. ಬರಲಿರುವ ದಿನಮಾನಗಳಲ್ಲಿ ಕ್ಯಾನ್ಸರ್ ಲಸಿಕೆ ಉಚಿತವಾಗಿ ದೊರೆಯುವಂತಾಗಲಿ. ಆ ಮೂಲಕ ಕ್ಯಾನ್ಸರ್ ಶಮನಗೊಳ್ಳಲಿ ಎಂದರು.

ಗದಗ ಐಎಂಎ ಅಧ್ಯಕ್ಷ ಡಾ. ಜಿ.ಎಸ್. ಪಲ್ಲೇದ, ಕಾರ್ಯದರ್ಶಿ ಡಾ. ಚಂದ್ರಶೇಖರ ಬಳ್ಳಾರಿ, ರಾಷ್ಟ್ರೀಯ ಐಎಂಎ ಉಪಾಧ್ಯಕ್ಷ ಡಾ. ಜಿ.ಬಿ. ಬಿಡನಾಳ ವಿಶೇಷ ಅತಿಥಿಗಳಾಗಿ ಆಗಮಿಸಿದ್ದರು. ವೇದಿಕೆಯ ಮೇಲೆ ಹಿರಿಯ ತಜ್ಞ ವೈದ್ಯ ಡಾ.ಶಶಿಧರ ರೇಶ್ಮೆ ಉಪಸ್ಥಿತರಿದ್ದರು. ಗಾಗ್ಸ್ ನೂತನ ಅಧ್ಯಕ್ಷರಾಗಿ ಡಾ.ಪ್ರವೀಣ ಸಜ್ಜನರ, ಕಾರ್ಯದರ್ಶಿಯಾಗಿ ಡಾ. ರಶ್ಮಿ ಪಾಟೀಲ, ಖಜಾಂಚಿಯಾಗಿ ಡಾ. ತೇಜಸ್ವಿನಿ ಹಿರೇಮಠ ಹಾಗೂ ಇತರರು ಅಧಿಕಾರ ವಹಿಸಿಕೊಂಡರು.

ಡಾ.ಶೃತಿಭಾವಿ ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಸಪ್ನಾ ಕಾಳೆ ಪರಿಚಯಿಸಿದರು. ಡಾ.ಅನ್ನಪೂರ್ಣ ಧನ್ನೂರ ನಿರೂಪಿಸಿ ವರದಿ ಸಾದರಪಡಿಸಿದರು. ಕೊನೆಗೆ ಸಂತೋಷ ಹಯಿಲಗೋಳ ವಂದಿಸಿದರು.




ಕ್ಯಾನ್ಸರ್ ಬರಲು ಕಾರಣವೇನು, ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳೇನು ಎಂದು ಜನಸಾಮಾನ್ಯರಿಗೆ ತಿಳಿಸಿ ಜಾಗೃತಿ ಮೂಡಿಸುವ ಕಾರ್ಯ ವೈದ್ಯರಿಂದ, ಸಮಾಜ ಸೇವಕರಿಂದ, ಸಂಘ-ಸಂಸ್ಥೆ ಹಾಗೂ ಮಾಧ್ಯಮಗಳ ಮೂಲಕ ಆಗಬೇಕಿದೆ. ಈ ಕಾರಣಕ್ಕಾಗಿ ರಾಜ್ಯ ಕಸೂಗಾ ಜಾಗೃತಿಯ ಕಾರ್ಯಕ್ರಮಗಳನ್ನು ರೂಪಿಸಿದ್ದು, ಈ ಕಾರ್ಯ ಗದುಗಿನಲ್ಲೂ ನಡೆಯಲಿ, ಹೊಸ ಪದಾಧಿಕಾರಿಗಳು ಚೆನ್ನಾಗಿ ಕೆಲಸ ಮಾಡಲಿ ಎಂದು ರಾಜ್ಯ ಕಸೂಗಾ ಅಧ್ಯಕ್ಷೆ ಡಾ.ಭಾರತಿ ರಾಜಶೇಖರ ಆಶಿಸಿದರು.

# ಡಾ.ಅಂಬೇಡ್ಕರ್ ಭಾವಚಿತ್ರ ಇಡುವುದು ಕಡ್ಡಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಗಣರಾಜ್ಯೋತ್ಸವ ದಿನವಾದ ಜನೆವರಿ 26, ಸ್ವಾತಂತ್ರ್ಯೋತ್ಸವ ದಿನಾಚರಣೆಯ ಆಗಸ್ಟ 15ರಂದು ರಾಜ್ಯದ ಎಲ್ಲ ಸರ್ಕಾರಿ ಕಚೇರಿಗಳು, ಸರ್ಕಾರಿ ಸ್ವಾಮ್ಯಕ್ಕೆ ಒಳಪಡುವ ಸಂಸ್ಥೆಗಳು, ಶಾಲಾ ಕಾಲೇಜು ಸೇರಿದಂತೆ ಸರ್ಕಾರದ ವತಿಯಿಂದ ನಡೆಯುವ ಎಲ್ಲ ಸಮಾರಂಭಗಳಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಭಾವಚಿತ್ರದೊಂದಿಗೆ ಸಂವಿಧಾನದ ಪಿತಾಮಹ, ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್‌ಅವರ ಭಾವಚಿತ್ರವನ್ನು ಸಹ ಕಡ್ಡಾಯವಾಗಿ ಇಡುವಂತೆ ಸರ್ಕಾರದ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

ನವೆಂಬರ್ 26ರ ಸಂವಿಧಾನದ ದಿನಾಚರಣೆ ಸಂದರ್ಭದಲ್ಲಿ ಮೇಲ್ಕಂಡ ಎಲ್ಲ ಸಂಸ್ಥೆಗಳು, ಶಾಲಾ ಕಾಲೇಜುಗಳು ಹಾಗೂ ಸರ್ಕಾರಿ ಕಚೇರಿಗಳಲ್ಲಿ ಸಂವಿಧಾನದ ಪಿತಾಮಹ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರವನ್ನು ಕಡ್ಡಾಯವಾಗಿ ಇಡುವಂತೆ ಸರ್ಕಾರದ ಸುತ್ತೋಲೆಯಲ್ಲಿ ಸೂಚಿಸಲಾಗಿದೆ. ಸರ್ಕಾರದ ಸುತ್ತೋಲೆಯಂತೆ ಎಲ್ಲ ಇಲಾಖೆಗಳು ಕ್ರಮ ಕೈಗೊಳ್ಳಲು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಮಹೇಶ ಪಿ.ಪೋತದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀರಾವರಿ ಯೋಜನೆಗಳ ಅನುಷ್ಠಾನವಾಗಲಿ

▶▶ಮೊದಲನೇ ಪುಟದಿಂದ

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಈ ವಿಚಾರದಲ್ಲಿ ಹೆಚ್ಚಿನ ಮುತುವರ್ಜಿ ವಹಿಸಬೇಕಿದೆ. ಅವರಿಗೂ ಮನವಿ ಪತ್ರ ನೀಡಿದ್ದು, ಒಂದು ತಿಂಗಳ ಗಡುವು ನೀಡಲಾಗಿದೆ. ಆಗಲೂ ಪ್ರಗತಿ ಕಾಣದಿದ್ದರೆ ಸಂಸದರು, ಕೇಂದ್ರ ಸಚಿವರ ಮನೆ ಮುಂದೆ ಧರಣಿ ಕೂರಲಾಗುವುದು ಎಂದು ತಿಳಿಸಿದರು.

ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಮಾತನಾಡಿ, ಜಿಲ್ಲೆಯ ನೀರಾವರಿ ಯೋಜನೆಗಾಗಿ ರಾಜ್ಯದ ವಿವಿಧೆಡೆಯಿಂದ ಕರವೇ ಕಾರ್ಯಕರ್ತರು ಬಂದು ಹೋರಾಟ ಕೈಗೊಂಡಿದ್ದು, ಪಾದಯಾತ್ರೆಯನ್ನು ಶಾಂತಿಯುತವಾಗಿ ನಡೆಸಿದ್ದಾಗಿ ಅಭಿನಂದಿಸುವೆ. ನಿಮ್ಮ ಮನವಿಯನ್ನು ಸರ್ಕಾರಕ್ಕೆ ಮುಟ್ಟಿಸಲಾಗುವುದು ಎಂದು ತಿಳಿಸಿದರು.

ಪಾದಯಾತ್ರೆಯಲ್ಲಿ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ಯುವಕ ಮಂಡಳಿಯ ಕಾರ್ಯಗಳು ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ಗದಗ

ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ಆರೋಗ್ಯ ತಪಾಸಣೆಯಂಥಹ ಸಾಮಾಜಿಕ ಕಾರ್ಯಕ್ರಮಗಳನ್ನು ಸತತವಾಗಿ ಹಮ್ಮಿಕೊಳ್ಳುತ್ತಿರುವ ಗಜಾನನ ಯುವಕ ಮಂಡಳಿಯ ಸಾಮಾಜಿಕ ಕಾರ್ಯಗಳು ಶ್ಲಾಘನೀಯ ಎಂದು ನಗರದ ಪೊಲೀಸ್ ಠಾಣೆಯ ಸಿಪಿಐ ಬಿ.ಡಿ. ಪಾಟೀಲ ನುಡಿದರು.

ಅವರು ಇತ್ತೀಚೆಗೆ ನಗರದ ಕಿಲ್ಲಾ ಚಂದ್ರಸಾಲಿ ಗಜಾನ ಯುವಕ ಮಂಡಳ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿ, ಕಿಲ್ಲಾ ಓಣಿಯ ಯುವಕರು ಹಾಗೂ ಹಿರಿಯರು ಕೂಡಿಕೊಂಡು ಸಂಘಟನಾ ಮನೋಭಾವದಿಂದ ಅರ್ಥಪೂರ್ಣ ಕಾರ್ಯಕ್ರಮಗಳನ್ನು ನೆರವೇರಿಸುತ್ತಿರುವುದು ಅಭಿನಂದನೀಯ ಎಂದರು.

ಈ ಸಂದರ್ಭದಲ್ಲಿ ವಾರ್ಡ್‌ನ ನಗರಸಭೆ ಸದಸ್ಯರಾದ ಶೈಲಾ ಬಾಕಳೆ, ಗಜಾನನ ಸಮಿತಿ ಅಧ್ಯಕ್ಷ ಶ್ರೀಕಾಂತ್ ಪವಾರ್, ಉಪಾಧ್ಯಕ್ಷ ಸುಧೀರ ಕಾಟೀಗಾರ, ಕಾರ್ಯದರ್ಶಿ ರವಿ ಚವಾಣ್, ಹಿರಿಯರಾದ ಪರಶುರಾಮಸಾ ಬದಿ, ಕೃಷ್ಣಾಸಾ ಲದ್ವಾ, ಪರಶುರಾಮ ಮಿಸ್ಕಿನ್, ದತ್ತುಸಾ ಬೇರವಿನಟ್ಟಿ, ಮನೋಹನ ದಲಬಂಜನ, ನರಸಿಂಹ ಖೋಡೆ, ಪ್ರಕಾಶ ಕಾಟಿಗಾರ, ಬಾಬು ಕಾಟಿಗಾರ, ವಸಂತ ಬಾಕಳೆ, ರಾಜೇಶ ಖೋಡೆ, ಚೇತನ ಲದ್ವಾ, ಮಹಿಳಾ ಮಂಡಳಿಯ ಸರೋಜಿಬಾಯಿ ಶೇಜ್ವಾಡ್ಕರ್, ಮಾಲಾ ಬದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ರಾಜೇಶ ಖೋಡೆ ಕಾರ್ಯಕ್ರಮ ನಿರೂಪಿಸಿದರು.




# ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳ (ಸಾಮಾನ್ಯ ಪದವಿ ಮಟ್ಟದ ಕೋರ್ಸ್, ವೃತ್ತಿಪರ ಕೋರ್ಸ್ ಮತ್ತು ಸ್ನಾತಕೋತ್ತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಎಸ್‌ಎಚ್‌ಪಿ (ಸ್ಟೇಟ್ ಹಾಸ್ಟೆಲ್ ಪೋರ್ಟಲ್) ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಪೋಷಕರು/ವಿದ್ಯಾರ್ಥಿಗಳು ವೆಬ್‌ಸೈಟ್ ವಿಳಾಸ https://shp.karnataka.gov.in/ ಮೂಲಕ ಅಕ್ಟೋಬರ್ 5ರೊಳಗಾಗಿ ಆಲ್‌ಲೈನ್ ಅರ್ಜಿಗಳನ್ನು ಸಲ್ಲಿಸಿ ಅರ್ಜಿ ಪ್ರತಿ ಹಾಗೂ ಎಲ್ಲಾ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಗಳಿಗೆ ನೀಡಲು ತಿಳಿಸಿದೆ. ಕೊನೆಯ ದಿನಾಂಕದ ನಂತರ ಸ್ವೀಕೃತವಾಗುವ ಯಾವುದೇ ಅರ್ಜಿ/ಕೋರಿಕೆಗಳನ್ನು ಪರಿಗಣಿಸಲು ಅವಕಾಶವಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಹಾಗೂ ಹತ್ತಿರದ ವಸತಿ ನಿಲಯಗಳಿಗೆ ಭೇಟಿ ನೀಡಿ ಸಂಪರ್ಕಿಸಬಹುದಾಗಿದೆ.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳ (ಸಾಮಾನ್ಯ ಪದವಿ ಮಟ್ಟದ ಕೋರ್ಸ್, ವೃತ್ತಿಪರ ಕೋರ್ಸ್ ಮತ್ತು ಸ್ನಾತಕೋತ್ತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಎಸ್‌ಎಚ್‌ಪಿ (ಸ್ಟೇಟ್ ಹಾಸ್ಟೆಲ್ ಪೋರ್ಟಲ್ ) ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಪೋಷಕರು/ವಿದ್ಯಾರ್ಥಿಗಳು ವೆಬ್‌ಸೈಟ್ ವಿಳಾಸ https://shp.karnataka.gov.in/ ಮೂಲಕ ಅಕ್ಟೋಬರ್ 5ರೊಳಗಾಗಿ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಿ ಅರ್ಜಿ ಪ್ರತಿ ಹಾಗೂ ಎಲ್ಲಾ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಗಳಿಗೆ ಸಲ್ಲಿಸಲು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಕ್ತದಾನ ಶಿಬಿರ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಲಿಂಗೈಕ್ಯ ಪರಮಪೂಜ್ಯ ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳ 32ನೇ ಶ್ರದ್ಧಾಂಜಲಿಯ ಪ್ರಯುಕ್ತ ತರಳಬಾಳು ಜಗದ್ಗುರು ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಸ್ವಾಮಿ ವಿವೇಕಾನಂದ ರಕ್ತ ಭಂಡಾರ ಇವರ ಸಹಯೋಗದೊಂದಿಗೆ ಶುಕ್ರವಾರ ರಕ್ತದಾನ ಶಿಬಿರ ಏರ್ಪಡಿಸಲಾಗಿತ್ತು.

ಪ್ರಾಂಶುಪಾಲ ಕೆ.ಎಂ. ಗುರುದೇವ, ಮಹಾಬಲೇಶ್ವರ ಗೌಡ, ಸಿದ್ದಪ್ಪ ಸಿ, ಗುಂಡಗತ್ತಿ ಮಂಜುನಾಥ, ಕೆ.ಜಿ. ಶಿವಯೋಗಿ, ವಾಮನಗೌಡ, ಗೋಪಾಲರೆಡ್ಡಿ, ಚಂದ್ರಪ್ಪ ಟಿ, ಸಂಗಮೇಶ್, ನರೇಶಪ್ಪ, ವೀರಭದ್ರಾಚಾರಿ, ಪ್ರಭುದೇವ, ಜೆ.ತಿಪ್ಪೇಶ್, ವಿ.ಎಂಹನಗೋಡಿ, ತಿರುಮಲೇಶ್ ಸೇರಿದಂತೆ ಇತರರಿದ್ದರು.

# ಸಹಕಾರಿ ಸಂಘದ ವಾರ್ಷಿಕ ಸಭೆ




■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಮೀಪದ ಸಂಭಾಪೂರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಿಯತಮಿತ 113ನೇ ವಾರ್ಷಿಕ ಮಹಾಸಭೆಯು ಜರುಗಿತು.

ಸಭೆಯ ಅಧ್ಯಕ್ಷತೆಯನ್ನು ಸಂಘದ ಉಪಾಧ್ಯಕ್ಷೆ ಲಕ್ಷ್ಮವ್ವ ಹೊಸಮನಿ ವಹಿಸಿದ್ದರು. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ಬಿ. ಬೆಣಕಲ್ ವಾರ್ಷಿಕ ವರದಿಯನ್ನು ಓದಿ, ಸಂಘವು ಪ್ರಸ್ತುತ ವರ್ಷದಲ್ಲಿ 73,1982 ರೂ ನಿವ್ವಳ ಲಾಭ ಗಳಿಸಿದೆ. ಎಲ್ಲ ಶೇರುದಾರ ರೈತರಿಗೆ ಶೇ.12ರಷ್ಟು ಲಾಭಾಂಶವನ್ನು ಘೋಷಣೆ ಮಾಡಲಾಗಿದೆ ಎಂದು ಸಭೆಗೆ ತಿಳಿಸಿದರು. ಸಂಘದ ಸರ್ವ ಸದಸ್ಯರು, ಗುರು-ಹಿರಿಯರು ಪಾಲ್ಗೊಂಡಿದ್ದರು. ಸಂಘದ ಸದಸ್ಯರಾದ ಬಸವನಗೌಡ ಹೊಸಮನಿ ಸ್ವಾಗತಿಸಿದರು. ಹನುಮರೆಡ್ಡಿ ನಾಗನೂರು ವಂದಿಸಿದರು.

# ಈ ಬಾರಿ ಮೈಸೂರು ದಸರಾ ಉದ್ಘಾಟಕರಾಗಿ ಸಾಹಿತಿ ಹಂಪ ನಾಗಾರಾಜಯ್ಯ!

■ವಿಜಯಸಾಕ್ಷಿ ಸುದ್ದಿ, ಮೈಸೂರು



ವಿಶ್ವವಿಖ್ಯಾತ ಮೈಸೂರು ದಸರಾಗೆ ದಿನಗಣನೆ ಆರಂಭವಾಗಿದೆ. ಇದಕ್ಕಾಗಿ ಅರಮನೆ ಆಡಳಿತ ಮಂಡಳಿ ಭರದಿಂದ ಸಿದ್ದತೆ ಮಾಡಿಕೊಳ್ಳುತ್ತಿದೆ. ಇನ್ನೂ ಈ ಬಾರಿಯ ವಿಶ್ವವಿಖ್ಯಾತ ಮೈಸೂರು ದಸರಾ ಉದ್ಘಾಟಕರಾಗಿ ಸಾಹಿತಿ ಹಂ.ಪ.ನಾಗರಾಜಯ್ಯ ಅವರಿಗೆ ಆಹ್ವಾನ ನೀಡಲಾಗಿದೆ.

ಮೈಸೂರು ದಸರಾ 2024 ಉದ್ಘಾಟನೆಗೆ ಹಿರಿಯ ಸಾಹಿತಿ ಹಂ.ಪ.ನಾಗರಾಜಯ್ಯರನ್ನು ಆಹ್ವಾನಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಘೋಷಿಸಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಹಂ.ಪ.ನಾಗರಾಜಯ್ಯ ಅವರು ಕನ್ನಡದ ಪ್ರಮುಖ ಭಾಷಾ ವಿಜ್ಞಾನಿ, ಸಂಶೋಧಕ. 'ಹಂಪನಾ' ಕಾವ್ಯನಾಮದಿಂದ ಬರೆಯುವ ನಾಗರಾಜಯ್ಯ ಮೂಲತಃ ಗೌರಿಬಿದನೂರು ತಾಲೂಕಿನ ಹಂಪಸಂದ್ರದವರು.

ಮೈಸೂರಿನ ಮಹಾರಾಣಿ ಕಾಲೇಜಿನಲ್ಲಿ ಅಧ್ಯಾಪಕರಾಗಿ ವೃತ್ತಿಜೀವನ ಆರಂಭಿಸಿದ ಅವರು ನಂತರ ಮಂಡ್ಯ, ದಾವಣಗೆರೆ, ಶಿವಮೊಗ್ಗ ಸರ್ಕಾರಿ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸಿದ್ದರು. ಸೆಂಟ್ರಲ್ ಕಾಲೇಜಿಗೆ ಸೇರಿದ ಅವರು ನಂತರ ಬೆಂಗಳೂರು ವಿಶ್ವವಿದ್ಯಾಲಯದ ಕನ್ನಡ ಪ್ರಾಧ್ಯಾಪಕರಾಗಿ, ಕನ್ನಡ ಅಧ್ಯಯನ ಕೇಂದ್ರದ ನಿರ್ದೇಶಕರಾಗಿ ಕಾರ್ಯನಿರ್ವಹಿಸಿ ನಿವೃತ್ತರಾದರು.

ಕನ್ನಡ ಸಾಹಿತ್ಯ ಲೋಕಕ್ಕೆ ಹಲವು ಮೌಲಿಕ ಕೃತಿಗಳನ್ನು ಕೊಡುಗೆಯಾಗಿ ಕೊಟ್ಟಿದ್ದಾರೆ.




ಗದಗ ನಗರದ ವಿದ್ಯಾದಾನ ಸಮಿತಿ ಶಾಲೆಯಲ್ಲಿ ನಡೆದ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದ ಛದ್ಮವೇಷ ಸ್ಪರ್ಧೆಯಲ್ಲಿ ಹನುಮಂತನ ವೇಷಭೂಷಣ ತೊಟ್ಟ ವಿಡಿಎಸ್ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿ ಅನೀಶ್ ಘೋರೆ ಎಲ್ಲಾ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರನಾದನು.



ಗದುಗಿನ ಸಾರ್ವಜನಿಕ ಗಜಾನನ ಮಹಾಮಂಡಳದ ಉಪಾಧ್ಯಕ್ಷರು, ಯುವ ಉದ್ಯಮಿ, ಸಾಮಾಜಿಕ ಕಾರ್ಯಕರ್ತರಾದ ಶಂಕರ ಶಿವಪ್ಪ ಮುಳಗುಂದ ಅವರ ಜನ್ಮದಿನಾಚರಣೆ ಹಿನ್ನೆಲೆಯಲ್ಲಿ ಶುಕ್ರವಾರ ಅವರನ್ನು ಸನ್ಮಾನಿಸಿ, ಗೌರವಿಸಿ ಅಭಿನಂಧಿಸಲಾಯಿತು. ಈ ಸಂದರ್ಭದಲ್ಲಿ ಸಾಮಾಜಿಕ ಕಾರ್ಯಕರ್ತರಾದ ಕರೀಮಸಾಬ ಸುಣಗಾರ, ಪತ್ರಕರ್ತ ಸುನೀಲಸಿಂಗ್ ಲದ್ದಿಗೇರಿ, ಸುರೇಂದ್ರಸಿಂಗ್ ಕಾಟೇವಾಲ ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka